ಸಂಪುಟ : ೨ ಸಂಚಿಕೆ 61 ಪುಟ : 4 ಬೆಲೆ: ೩.೦೦ ಶನಿವಾರ ಎಪ್ರಿಲ್ 6 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 61 Pages : 4 Price : 3.00 Saturday April 6 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಅಬ್ಬಿಗೇರಿಯಲ್ಲಿ ನಡೆದ ಕಾಂಗ್ರೆಸ್ ಕಾರ್ಯಕರ್ತರ ಸಭೆಯಲ್ಲಿ ಶಾಸಕ ಜಿ.ಎಸ್. ಪಾಟೀಲ

## ವಿರೋಧಿಗಳ ತುಳಿತಕ್ಕೆ ಕಾಂಗ್ರೆಸ್ ಜಗ್ಗದು

■ **ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ದೇಶಕ್ಕೆ ಸಂವಿಧಾನವನ್ನು ನೀಡಿ ಎಲ್ಲರಿಗೂ ಸಮ ಬಾಳು, ಎಲ್ಲರಿಗೂ ಸಮ ಪಾಲು ಎಂದು ಬೋಧಿಸಿದವರು ಸಂವಿಧಾನ ಶಿಲ್ಪಿ ಡಾ. ಬಾಬಾಸಾಹೇಬ ಅಂಬೇಡ್ಕರರು. ಅವರು ರಚಿಸಿದ ಸಂವಿಧಾನವನ್ನು ಇಡೀ ಜಗತ್ತೇ ಕೊಂಡಾಡುತ್ತಿದೆ. ಅಂತಹ ಸಂವಿಧಾನ ಈಗ ಅಪಾಯದಲ್ಲಿದೆ. ದೇಶದಲ್ಲಿನ ಸಾಂವಿಧಾನಿಕ ನಾಯಕರನ್ನು ಉದ್ದೇಶಪೂರ್ವಕವಾಗಿ ಜೈಲಿಗೆ ಅಟ್ಟುವ ಮೂಲಕ ಸಂವಿಧಾನವನ್ನು ಅವಮಾನಿಸಲಾಗುತ್ತಿದೆ. ಈ ಮೂಲಕ ವಿರೋಧ ಪಕ್ಷದವರನ್ನು ದಮನ ಮಾಡುವ ನೀತಿಯನ್ನು ಬಿಜೆಪಿ ಅನುಸರಿಸುತ್ತಿದೆ ಎಂದು ರೋಣ ಶಾಸಕ, ಗದಗ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಜಿ.ಎಸ್. ಪಾಟೀಲ ಹೇಳಿದರು.

ಸಮೀಪದ ಅಬ್ಬಿಗೇರಿಯಲ್ಲಿ ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಚುನಾವಣಾರ್ಥವಾಗಿ ಅಬ್ಬಿಗೇರಿಯ ಕಾಂಗ್ರೆಸ್ ಕಾರ್ಯಕರ್ತರ ಸಭೆಯನ್ನುದ್ದೇಶಿಸಿ ಅವರು ಮಾತನಾಡಿದರು.



ಕೇಂದ್ರ ಸರಕಾರ ವಿರೋಧ ಪಕ್ಷಗಳ ಮೇಲೆ ಇನ್ನಿಲ್ಲದ ಸಂವಿಧಾನ ವಿರೋಧಿ ಚಟುವಟಿಕೆಗಳನ್ನು ಕೈಗೊಳ್ಳುವ ಮೂಲಕ ಅವರ ಆತ್ಮವಿಶ್ವಾಸವನ್ನು ಹತ್ತಿಕ್ಕಲು ಪ್ರಯತ್ನಿಸುತ್ತಿದೆ. ಕಾಂಗ್ರೆಸ್ ಪಕ್ಷದ ಬ್ಯಾಂಕ್ ಖಾತೆಗಳನ್ನು ಮುಟ್ಟುಗೋಲು ಹಾಕುವುದು, ಇಲ್ಲದ ದಂಡವನ್ನು ತುಂಬಲು ತನಿಖಾ ಸಂಸ್ಥೆಗಳ ಮೂಲಕ ಒತ್ತಡವನ್ನು ತರುವುದರ ಮೂಲಕ ಕಾಂಗ್ರೆಸ್‌ನ್ನು ತುಳಿಯಲು ಬಿಜೆಪಿ ಪ್ರಯತ್ನಿಸುತ್ತಿದೆ. ಸ್ವಾತಂತ್ರ್ಯಪೂರ್ವದಿಂದಲೂ ಇರುವ ಕಾಂಗ್ರೆಸ್ ಪಕ್ಷ ಇದಾವುದಕ್ಕೂ ಜಗ್ಗದು, ಕುಗ್ಗದು ಎಂದು ಹೇಳಿದರು.

> ಬಿಜೆಪಿಯ ಕೆಲವು ನಾಯಕರು ನಾವು ಸಂವಿಧಾನವನ್ನು ಬದಲಿಸಲೆಂದೇ ಅಧಿಕಾರಕ್ಕೆ ಬರುತ್ತೇವೆ ಎಂಬ ಮಾತುಗಳನ್ನು ಹೇಳುತ್ತಾರೆ. ಈ ಮೂಲಕ ಅವರು ಭಾರತದ ಸಂವಿಧಾನವನ್ನು ಅಪವಿತ್ರಗೊಳಿಸಲು ಮುಂದಾಗುತ್ತಿದ್ದಾರೆ. ಈ ಚುನಾವಣೆಯಲ್ಲಿ ಇಂಥವರಿಗೆ ತಕ್ಕ ಪಾಠವನ್ನು ಕಲಿಸಬೇಕು. ಅದಕ್ಕಾಗಿ ನಮ್ಮ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗಳನ್ನು ಹೆಚ್ಚಿನ ಬಹುಮತದಿಂದ ಆರಿಸಿ ತರುವಂತೆ ನೀವೆಲ್ಲರೂ ಕಾರ್ಯ ನಿರ್ವಹಿಸಬೇಕು.
>
> **– ಜಿ.ಎಸ್. ಪಾಟೀಲ.**
> ಶಾಸಕರು, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರು.

ಪ್ರಾಸ್ತಾವಿಕವಾಗಿ ಮಾತನಾಡಿದ ಬಸವರಾಜ ಪಲ್ಲೇದ, ರಾಜ್ಯದಲ್ಲಿ ಅಧಿಕಾರದಲ್ಲಿರುವ ಕಾಂಗ್ರೆಸ್ ಪಕ್ಷದ ನೇತಾರ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸಾಮಾಜಿಕ ಯೋಜನೆಗಳು, ಅನೇಕ ಗ್ಯಾರಂಟಿಗಳನ್ನು ಜಾರಿಗೊಳಿಸುವ ಮೂಲಕ ತಾವು ನುಡಿದಂತೆ ನಡೆಯುವವರು ಎಂದು ಸಾಧಿಸಿ ತೋರಿಸಿದ್ದಾರೆ. ಆದರೆ ಕೇಂದ್ರ ಸರಕಾರ ಇಂತಹ ಒಂದೂ ಯೋಜನೆಯನ್ನು ಜಾರಿಗೊಳಿಸದೆ ದೇಶದ ಜನರನ್ನು ಸಂಕಷ್ಟಕ್ಕೆ ದೂಡಿದೆ. ಈ ಸಲದ ಲೋಕಸಭಾ ಚುನಾವಣೆಯಲ್ಲಿ ರಾಜ್ಯದ ಮತದಾರರು ಕಾಂಗ್ರೆಸ್ ಪಕ್ಷದ ಕೈ ಬಿಡುವ ಮಾತೇ ಇಲ್ಲ. ಹೀಗಾಗಿ ನಮ್ಮ ಪಕ್ಷ ಅತಿ ಹೆಚ್ಚಿನ ಸ್ಥಾನಗಳನ್ನು ಗೆದ್ದು ಕೇಂದ್ರದಲ್ಲಿ ಅಧಿಕಾರದ ಚುಕ್ಕಾಣಿ ಹಿಡಿಯಲಿದೆ ಎಂದರು.

ಈ ಸಂದರ್ಭದಲ್ಲಿ ಬಸವರಾಜ ಶ್ರೀಗಳು, ಡಾ. ಆರ್.ಬಿ. ಬಸವರಡ್ಡೇರ, ಪರಶುರಾಮ ಅಳಗವಾಡಿ, ಬಸವರಾಜ ನವಲಗುಂದ, ವಿ.ಆರ್. ಗುಡಿಸಾಗರ, ವಿ.ಬಿ. ಸೋಮಕಟ್ಟಿಮಠ, ಅಕ್ಷಯ ಪಾಟೀಲ, ಎಸ್. ಎಚ್. ಸೋಂಪೂರ, ರೂಪಾ ಅಂಗಡಿ, ಗುರಣ್ಣ ಅವರೆಡ್ಡಿ, ಸುರೇಶ ಬಸವರಡ್ಡೇರ, ಮಂಜು ಪಸಾರದ, ಸಕ್ರಗೌಡ್ರು ಪಾಟೀಲ, ಹನುಮಂತಪ್ಪ ದ್ವಾಸಲ, ಸಿದ್ದು ಹನುಮನಾಳ, ಮುತ್ತಪ್ಪ ಕುಕನೂರ, ಬಸವರಾಜ ತಳವಾರ, ಮಹಾದೇವಪ್ಪ ಕಂಬಳಿ, ಭೀಮಶಿ ಮಲ್ಲಾಪೂರ, ಸಂಗಣ್ಣ ಉಪಾಧ್ಯ, ಲಕ್ಷ್ಮಣ ಹಿರೇಮನಿ, ಅಂದಪ್ಪ ವೀರಾಪೂರ, ಸುರೇಶ ಶಿರೋಳ, ಶಿವಪುತ್ರಪ್ಪ ಕೆಂಗಾರ, ಸಿ.ಕೆ. ಕಾಳಗಿ, ರಾಮನಗೌಡ ಹಲಕುರ್ಕಿ, ಮಹಾಂತೇಶ ತಳವಾರ, ಬಾಬೂ ಬನ್ನಿಕೊಪ್ಪ, ಮಂಜು ಚಿತ್ತರಗಿ, ಸೋಮು ವಡವಿ, ಎ.ಕೆ. ಮಳಗಿ, ಭೀಮಣ್ಣ ಚಿಕ್ಕೇನಕೊಪ್ಪ, ಮಲ್ಲಣ್ಣ ಕಲ್ಲೇಶ್ಯಾನಿ ಮುಂತಾದ ಕಾರ್ಯಕರ್ತರು ಉಪಸ್ಥಿತರಿದ್ದರು.

## ಕಸಾಪದಿಂದ 'ಹಾಸ್ಯ ಲಾಸ್ಯ' ಇಂದು

■ **ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು, ಗದಗ ವತಿಯಿಂದ ಏ.6ರ ಸಂಜೆ 6 ಗಂಟೆಗೆ ಕಸಾಪ ಕಾರ್ಯಾಲಯದ ತೋಂಟ-ದ ಸಿದ್ಧಲಿಂಗ ಶ್ರೀ ಕನ್ನಡ ಭವನದಲ್ಲಿ ಯುಗಾದಿ ಅಂಗವಾಗಿ 'ಹಾಸ್ಯ ಲಾಸ್ಯ' ಹಾಗೂ ಅಕಾಡೆಮಿ ಸದಸ್ಯರಿಗೆ ಸನ್ಮಾನ ಸಮಾರಂಭ ಜರುಗಲಿದೆ.

ಹಾಸ್ಯ ಪ್ರಸಂಗಗಳನ್ನು ನರೇಗಲ್‌ದ ನಗೆ ಭಾಷಣಕಾರರಾದ ಅರುಣ ಕುಲಕರ್ಣಿ ಅವರು ಪ್ರಸ್ತುತ ಪಡಿಸುವರು. ಸಮಾರಂಭದ ಅಧ್ಯಕ್ಷತೆಯನ್ನು ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ವಹಿಸುವರು. ಕರ್ನಾಟಕ ಸಾಹಿತ್ಯ ಅಕಾಡೆಮಿ ಸದಸ್ಯರಾಗಿ ನೇಮಕಗೊಂಡ ನಿಮಿತ್ತ ದಲಿತ ಸಾಹಿತ್ಯ ಪರಿಷತ್‌ನ ರಾಜ್ಯಾಧ್ಯಕ್ಷ ಡಾ. ಅರ್ಜುನ ಗೊಳಸಂಗಿ, ಕರ್ನಾಟಕ ಜಾನಪದ ಅಕಾಡೆಮಿ ಸದಸ್ಯರಾಗಿ ನೇಮಕಗೊಂಡ ನಿಮಿತ್ತ ಶಂಕ್ರಣ್ಣ ಸಂಕಣ್ಣವರ ಕೊತಬಾಳ ಹಾಗೂ ಸಾಹಿತ್ಯ ಕ್ಷೇತ್ರದ ಸೇವೆಗೆ 'ಕಿತ್ತೂರಚನ್ನಮ್ಮ' ಪ್ರಶಸ್ತಿ ಪಡೆದ ನಿಮಿತ್ತ ವಿ.ವಿ. ಹಿರೇಮಠ ಇವರಿಗೆ ಸನ್ಮಾನ ಜರುಗಲಿದೆ. ಆತಿಥ್ಯವನ್ನು ನಿವೃತ್ತ ಅಧ್ಯಾಪಕರು ಹಾಗೂ ಚಿಂತಕರಾದ ಎನ್.ಎಚ್. ಹಿರೇಸಕ್ಕರಗೌಡರ ವಹಿಸುವರು

ಕಾರ್ಯಕ್ರಮದಲ್ಲಿ ಸಾಹಿತ್ಯಾಸಕ್ತರು, ಪರಿಷತ್ತಿನ ಆಜೀವ ಸದಸ್ಯರು ಪಾಲ್ಗೊಳ್ಳಬೇಕೆಂದು ಕಾರ್ಯದರ್ಶಿಗಳಾದ ಶಿವಾನಂದ ಗಿಡ್ನಂದಿ, ಕಿಶೋರಬಾಬು ನಾಗರಕಟ್ಟಿ, ಕೋಶಾಧ್ಯಕ್ಷ ಈರಣ್ಣ ಮಾದರ, ಸಹ ಕಾರ್ಯದರ್ಶಿಗಳಾದ ಡಾ. ದತ್ತಪ್ರಸನ್ನ ಪಾಟೀಲ, ಶ್ರೀಕಾಂತ ಬಡ್ಡೂರ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

### ಸಂದಿಗವಾಡದಲ್ಲಿ ನರೇಗಾ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿದ ಎಸ್.ಕೆ. ಇನಾಮದಾರ

## ನಿಮ್ಮ ಮತವನ್ನು ಮಾರಿಕೊಳ್ಳಬೇಡಿ

■ **ವಿಜಯಸಾಕ್ಷಿ ಸುದ್ದಿ, ರೋಣ**

ಜಗತ್ತಿನ ಅತಿ ದೊಡ್ಡ ಪ್ರಜಾಪ್ರಭುತ್ವ ಹೊಂದಿರುವ ರಾಷ್ಟ್ರಗಳಲ್ಲಿ ನಮ್ಮ ಭಾರತ ದೇಶ ಅಗ್ರ ಸ್ಥಾನ ಪಡೆದಿದೆ. ನಮ್ಮ ದೇಶದ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಗಟ್ಟಿಯಾಗಿಸಲು ನಿಮ್ಮೆಲ್ಲರ ಸಹಕಾರ ಅಗತ್ಯ. ತಾವೆಲ್ಲರೂ ತಪ್ಪದೇ ಕಡ್ಡಾಯವಾಗಿ ಮಾತದಾನ ಮಾಡಿ, ಹಾಗೂ ಮಾಡಿಸಿ ಎಂದು ರೋಣ ತಾ.ಪಂ ಕಾರ್ಯ ನಿರ್ವಾಹಕ ಅಧಿಕಾರಿ ಎಸ್.ಕೆ. ಇನಾಮದಾರ ಹೇಳಿದರು.

ರೋಣ ತಾಲೂಕಿನ ಮಲ್ಲಾಪೂರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸಂದಿಗವಾಡ ಗ್ರಾಮದಲ್ಲಿ ನರೇಗಾ ಯೋಜನೆಯಡಿ ನಡೆದ ಸಮುದಾಯ ಕಾಮಗಾರಿಯ ಬದು ನಿರ್ಮಾಣ ಹೂಳೆತ್ತುವ ಕಾಮಗಾರಿ ಸಂದರ್ಭದಲ್ಲಿ ಭೇಟಿ ನೀಡಿ ಮಾತನಾಡಿದ ಅವರು, ಮೇ 7ರಂದು ನಮ್ಮ ದೇಶದಲ್ಲಿ ಸಾರ್ವತ್ರಿಕ ಚುನಾವಣೆ ನಡೆಯಲಿದೆ.




ಈ ಸಂದರ್ಭದಲ್ಲಿ ನಿಮ್ಮ ಮತವನ್ನು ಮಾರಿಕೊಳ್ಳಬೇಡಿ, ನಿಮ್ಮ ಮಕ್ಕಳ ಜೀವನವನ್ನು ದೃಷ್ಟಿಯಲ್ಲಿಟ್ಟುಕೊಂಡು ಮತದಾನ ಮಾಡಿ ಎಂದರು.

ಭಾರತದಲ್ಲಿ ಚುನಾವಣಾ ಆಯೋಗವು ಯಾರ ಹಂಗಿಲ್ಲದೇ, ಯಾರ ಆಡಳಿತಕ್ಕೆ ಒಳಪಡದೇ ಕೆಲಸ ಮಾಡುತ್ತದೆ. ಚುನಾವಣೆಯಲ್ಲಿ ಯಾರ ಹಸ್ತಕ್ಷೇಪವೂ ಇರಬಾರದು. ಅಂದಾಗ ಮಾತ್ರ ಪ್ರಜಾಪ್ರಭುತ್ವದ ಮೌಲ್ಯ ಹೆಚ್ಚಾಗುತ್ತದೆ, ಜನಪರ ಸರ್ಕಾರ ಆಡಳಿತಕ್ಕೆ ಬರಲು ಸಾಧ್ಯ. ಈ ಚುನಾವಣೆಯಲ್ಲಿ 80 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರಿಗೆ ಹಾಗೂ ದಿವ್ಯಾಂಗ ವ್ಯಕ್ತಿಗಳಿಗೆ ಮನೆಯಲ್ಲಿಯೇ ಮತದಾನ ಮಾಡಲು ಚುನಾವಣಾ ಆಯೋಗವು ಅವಕಾಶ ಮಾಡಿಕೊಟ್ಟಿದೆ ಎಂದರು.

ಈ ಸಂದರ್ಭದಲ್ಲಿ ಸಹಾಯಕ ನಿರ್ದೇಶಕ(ಗ್ರಾ.ಉ) ರಿಯಾಜ್ ಖತೀಬ್, ಮಲ್ಲಾಪೂರ ಗ್ರಾ.ಪಂ ಅಭಿವೃದ್ಧಿ ಅಧಿಕಾರಿ ರಶೀದ ಹುಣಸಿಮರದ, ತಾಂತ್ರಿಕ ಸಂಯೋಜಕ ಪ್ರವೀಣ ಸೂಡಿ, ಐಇಸಿ ಸಂಯೋಜಕ ಮಂಜುನಾಥ, ಬಿಎಫ್‌ಟಿ ಈರಣ್ಣ ಬೇಲೇರಿ ಸೇರಿದಂತೆ ಗ್ರಾ.ಪಂ ಸಿಬ್ಬಂದಿಗಳು ಹಾಜರಿದ್ದರು.

> ಉತ್ತರ ಕರ್ನಾಟಕ ಭಾಗದಲ್ಲಿ ಸಣ್ಣ ಹಿಡುವಳಿ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಇದ್ದಾರೆ. ಅವರು ಬಹುತೇಕ ಮಳೆ ಆಶ್ರಿತ ಕೃಷಿಯನ್ನು ಅವಲಂಬಿಸಿದ್ದಾರೆ. ಸಕಾಲಕ್ಕೆ ಮಳೆ ಆಗದ ಹಿನ್ನೆಲೆಯಲ್ಲಿ ಕೆಲಸ ಇಲ್ಲದೇ ಗೋವಾ, ಮಂಗಳೂರು, ಬೆಂಗಳೂರು ಸೇರಿದಂತೆ ಅನೇಕ ನಗರಗಳಿಗೆ ದುಡಿಯಲು ಗುಳೆ ಹೋಗುತ್ತಿದ್ದರು. ಆದರೆ ಇತ್ತೀಚಿನ ದಿನಗಳಲ್ಲಿ ಅಲ್ಲಿ ಕೊಡುವ ಕೂಲಿಯನ್ನು ನರೇಗಾ ಯೋಜನೆಯು ಕೊಡುವದರಿಂದ ಇಲ್ಲೇ ನೀವು ದುಡಿಯಲು ಬರುತ್ತಿದ್ದೀರಿ ಎಂದು ಎಸ್.ಕೆ. ಇನಾಮದಾರ ಹೇಳಿದರು.

### ಗಡ್ಡದೇವರಮಠ ಆಶ್ರಯ ಕಾಲೋನಿಯ ನಿವಾಸಿಗಳಿಂದ ನೀರಿಗಾಗಿ ಪುರಸಭೆಗೆ ದೌಡು

## ನೀರಿಗಾಗಿ ನೀರೆಯರ ಮುತ್ತಿಗೆ

■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ದೊಡ್ಡೂರ ರಸ್ತೆಯ ಹೊರವಲಯದ ಗಡ್ಡದೇವರಮಠ ಆಶ್ರಯ ಕಾಲೋನಿಯ ನಿವಾಸಿಗಳು ಶುಕ್ರವಾರ ನೀರಿಗಾಗಿ ಪುರಸಭೆಗೆ ಮುತ್ತಿಗೆ ಹಾಕಿ, ಆಕ್ರೋಶ ವ್ಯಕ್ತಪಡಿಸಿದರು.

ಈ ವೇಳೆ ಪುರಸಭೆಯ ಅಧಿಕಾರಿಗಳಿಗೆ ಕುಡಿಯುವ ನೀರು ಮತ್ತು ಮೂಲಭೂತ ಸೌಲಭ್ಯಕ್ಕಾಗಿ ಆಗ್ರಹಿಸಿದ ಮಹಿಳೆಯರು, ಗಡ್ಡದೇವರಮಠ ಆಶ್ರಯ ಪ್ಲಾಟಿನಲ್ಲಿ 20 ವರ್ಷದಿಂದ ನೂರಾರು ಕುಟುಂಬಗಳ ಜನರು ವಾಸಿಸುತ್ತಿದ್ದೇವೆ. ವರ್ಷದುದ್ದಕ್ಕೂ ನೀರಿನ ಸಮಸ್ಯೆ ತಪ್ಪುವುದಿಲ್ಲ. 400 ರೂ ದುಡ್ಡು ಕೊಟ್ಟು ಟ್ಯಾಂಕರ್ ನೀರು ಹಾಕಿಸಿಕೊಳ್ಳುವ ಶಕ್ತಿ ನಮ್ಮಲ್ಲಿಲ್ಲ. ಕಳೆದ 2 ತಿಂಗಳಿನಿಂದ ನದಿ ನೀರೂ ಬಂದ್ ಆಗಿದ್ದರಿಂದ ನೀರಿಗಾಗಿ ಪಟ್ಟಣ ಮತ್ತು ತೋಟಗಳಿಗೆ ಅಲೆಯುವಂತಾಗಿದೆ. ಇರುವ ಒಂದು ಬೋರ್‌ವೆಲ್ ಇಲ್ಲಿನ 200ಕ್ಕೂ ಹೆಚ್ಚು ಕುಟುಂಬಗಳಿಗೆ ಆಧಾರವಾಗಿದೆ.




ಹಲವು ವರ್ಷಗಳ ಹಿಂದೆ ನಿರ್ಮಿಸಿದ ಸಿಸ್ಟನ್ (ಸಣ್ಣ ನೀರು ಸಂಗ್ರಹ ಟ್ಯಾಂಕ್)ಗೆ ಕೊಳವೆ ಬಾವಿ ನೀರಿನ ಸಂಪರ್ಕ ಕಲ್ಪಿಸಿಲ್ಲ ಮತ್ತು ಮನೆಗಳ ನಳಗಳಿಗೆ ಸಂಪರ್ಕ ಕಲ್ಪಿಸಿಲ್ಲ. ಇದರಿಂದ ನಿವಾಸಿಗಳೆಲ್ಲರೂ ಪದೇ ಪದೇ ಬೋರ್ ಚಾಲೂ ಮಾಡುವುದರಿಂದ ಅಪಾರ ಪ್ರಮಾಣದ ನೀರು ಪೋಲಾಗುತ್ತದೆ ಮತ್ತು ಬೋರ್‌ವೆಲ್ ರಿಪೇರಿಗೆ ಬಂದರೆ ಸಮಸ್ಯೆ ಉಲ್ಬಣವಾಗುತ್ತದೆ. ಆದ್ದರಿಂದ ಕೊಳವೆಬಾವಿ ನೀರನ್ನು ಸಿಸ್ಟನ್‌ಗೆ ಮತ್ತು ಮನೆಗಳ ನಳಕ್ಕೆ ಸಂಪರ್ಕ ಕಲ್ಪಿಸಬೇಕು. ಹತ್ತಾರು ವರ್ಷಗಳಿಂದ ರಸ್ತೆ, ಚರಂಡಿ ಸೇರಿ ಮೂಲ ಭೂತ ಸೌಲಭ್ಯಗಳಿಲ್ಲದೇ ಪರದಾಡುತ್ತಿದ್ದೇವೆ. ನಮ್ಮ ಸಮಸ್ಯೆಗಳಿಗೆ ಕೂಡಲೇ ಸ್ಪಂದಿಸದಿದ್ದರೆ ಬರುವ ಚುನಾವಣೆಯಲ್ಲಿ ಮತದಾನದಿಂದ ಹೊರಗುಳಿಯಬೇಕಾಗುತ್ತದೆ ಮತ್ತು ನೀರಿಗಾಗಿ ಪುರಸಭೆ ಮುಂದೆ ಪ್ರತಿಭಟನೆ ನಡೆಸಬೇಕಾಗುತ್ತದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಮಹಿಳೆಯರಾದ ಸೈನಾಜಬೀ ತಸೀಲ್ದಾರ, ಬಸಮ್ಮ ಕೊಪ್ಪಳ, ಶಮನಾಜ ಹೆಸರೂರ, ಶಾಂತವ್ವ ಹಿರೇಮಠ, ರೇಣುಕಾ ಮುಳಗುಂದ, ಗೀತಾ ಹಡಪದ, ಪಾತಿಮಾ ಅಣಜಾನವರ, ಖಾಜಾಪೀರ ಕಾರಡಗಿ, ದಾವಲ್ ಗುಳೇದಗುಡ್ಡ, ಸಿರಾಜ ಡಾಲಾಯತ್, ಬಸವರಾಜ ದೊಡ್ಡಮನಿ, ಬಸವರಾಜ ಹಿರೇಮನಿ ಸೇರಿ ಹಲವರಿದ್ದರು.

ಪುರಸಭೆ ಮ್ಯಾನೇಜರ್ ಮಂಜುಳಾ ಹೂಗಾರ, ಶಿವಾನಂದ ಅಜ್ಜಣ್ಣವರ, ಎಸ್.ಪಿ. ಲಿಂಬಯ್ಯನಮಠ ಅವರು ಕೂಡಲೇ ನೀರು ಸರಬರಾಜು ಸಿಬ್ಬಂದಿಯೊಂದಿಗೆ ಸ್ಥಳಕ್ಕಾಗಮಿಸಿ, ಇವತ್ತೇ ತಾತ್ಕಾಲಿಕವಾಗಿ ನೀರಿನ ಸಮಸ್ಯೆ ಬಗೆಹರಿಸುತ್ತೇವೆ ಎಂದು ನಿವಾಸಿಗಳಿಗೆ ಸಮಧಾನ ಹೇಳಿ ಕಳುಹಿಸಿದ ಬೆನ್ನಲ್ಲೇ ಸ್ಥಳಕ್ಕಾಗಮಿಸಿದ ಅಧಿಕಾರಿ ಮತ್ತು ಸಿಬ್ಬಂದಿಗಳು ಬೋರ್‌ವೆಲ್ ನೀರನ್ನು ಸಾರ್ವಜನಿಕ ಸಿಸ್ಟನ್‌ಗೆ ಸಂಪರ್ಕ ಕಲ್ಪಿಸಿದರು.

> ಈ ಕುರಿತು ಪ್ರತಿಕ್ರಿಯಿಸಿದ ಮುಖ್ಯಾಧಿಕಾರಿ ಮಹೇಶ ಹಡಪದ, ನದಿ ನೀರು ಸರಬರಾಜು ನಿಂತಿರುವುದು, ಕೊಳವೆ ಬಾವಿಗಳ ನೀರಿನ ಮಟ್ಟ ಪಾತಾಳ ಕಂಡಿರುವುದರಿಂದ ಕುಡಿಯುವ ನೀರಿನ ಸಮಸ್ಯೆ ಉಲ್ಬಣಿಸಿದೆ. ಆದರೆ ಬಹುತೇಕ ವಾರ್ಡ್‌ಗಳಲ್ಲಿ ಸವಳು ನೀರಿನ ಸಾರ್ವಜನಿಕ ನಳದ ವ್ಯವಸ್ಥೆ ನಿರ್ವಹಿಸಲಾಗುತ್ತಿದೆ. ಒಂದು ವಾರದ ಹಿಂದೆ ಭದ್ರಾ ಜಲಾಶಯದಿಂದ ಬಿಟ್ಟ ನೀರು ಭಾನುವಾರದೊಳಗೆ ನಮ್ಮ ಭಾಗಕ್ಕೆ ಬಂದು ತಲುಪಲಿದೆ. ಒಂದು ವಾರದಲ್ಲಿ ಎಲ್ಲ ವಾರ್ಡುಗಳಿಗೆ ನದಿ ನೀರು ಸರಬರಾಜು ಮಾಡಲಾಗುವುದು. ನೀರಿನ ಮಿತ ಬಳಕೆ ಎಲ್ಲರ ಜವಾಬ್ದಾರಿ. ಜಿಲ್ಲಾಧಿಕಾರಿಗಳ ಆದೇಶದನ್ವಯ ನದಿಪಾತ್ರದಲ್ಲಿನ ರೈತರ ಪಂಪಸೆಟ್ ತೆರವುಗೊಳಿಸಲು ಕ್ರಮ ಕೈಗೊಳ್ಳಲಾಗುವುದು ಎಂದರು.



### ವಿಶೇಷ ಮತಗಟ್ಟೆಗಳಲ್ಲಿ ವಿಶಿಷ್ಟ ಚಿತ್ರ



■ **ವಿಜಯಸಾಕ್ಷಿ ಸುದ್ದಿ, ಗದಗ**

ಲೋಕಸಭಾ ಸಾರ್ವತ್ರಿಕ ಚುನಾವಣೆಯ ನಿಮಿತ್ತ ವಿಶೇಷ ಮತಗಟ್ಟೆಗಳಲ್ಲಿ ವಿಶಿಷ್ಟ ಚಿತ್ರ ಬಿಡಿಸಿ ಇದೇ ಏಪ್ರಿಲ್ ಮಾಸದ ಅಂತ್ಯದೊಳಗಾಗಿ ಪೂರ್ಣಗೊಳಿಸಬೇಕೆಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಹಾಗೂ ಜಿಲ್ಲಾ ಸ್ವೀಪ್ ನೋಡಲ್ ಅಧಿಕಾರಿ ಭರತ್ ಎಸ್ ತಿಳಿಸಿದರು.

ಗದಗ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಶುಕ್ರವಾರ ಜಿಲ್ಲಾ ಸ್ವೀಪ್ ಸಮಿತಿಯಿಂದ ಮಾದರಿ ಮತಗಟ್ಟೆಗಳ ನಿರ್ಮಾಣಕ್ಕಾಗಿ ಚಿತ್ರಕಲಾ ಶಿಕ್ಷಕರೊಂದಿಗೆ ಸಭೆ ಜರುಗಿಸಿ ಮಾತನಾಡಿದರು.

ಲೋಕಸಭಾ ಸಾರ್ವತ್ರಿಕ ಚುನಾವಣೆ-2024ರ ಅಂಗವಾಗಿ 'ಚುನಾವಣಾ ಪರ್ವ ದೇಶದ ಗರ್ವ' ಎಂಬ ಘೋಷವಾಕ್ಯದಂತೆ ಜಿಲ್ಲೆಯಲ್ಲಿ ವಿಧಾನಸಭಾ ಕ್ಷೇತ್ರಗಳಲ್ಲಿ ಪ್ರತಿಯೊಂದು ವಿಧಾನಸಭಾ ಕ್ಷೇತ್ರದಲ್ಲಿ ಸಖಿ-5, ಯುವ-1, ಪಿಡಬ್ಲುಡಿ-1, ಧ್ಯೇಯ ಆಧಾರಿತ-1 ಥೀಮ್-1ರಂತೆ ಒಂದು ವಿಧಾನಸಭಾ ಕ್ಷೇತ್ರದಲ್ಲಿ 9 ಮತಗಟ್ಟೆಗಳಂತೆ, ಜಿಲ್ಲೆಯಲ್ಲಿ ಒಟ್ಟಾರೆಯಾಗಿ 36 ವಿಶೇಷ ಮತಗಟ್ಟೆಗಳನ್ನು ನಿರ್ಮಿಸಲು ಉದ್ದೇಶಿಸಲಾಗಿದೆ. ಈ ಮತಗಟ್ಟೆಗಳನ್ನು ವಿಶಿಷ್ಟವಾಗಿ ಚಿತ್ರಗಳನ್ನು ಬಿಡಿಸಲು ಮತ್ತು ಇದೇ ಏಪ್ರಿಲ್ ಮಾಸಾಂತ್ಯದೊಳಗಾಗಿ ಪೂರ್ಣಗೊಳಿಸಲು ಅವರು ಸಲಹೆ ನೀಡಿದರು.

ವಿಶಿಷ್ಟ ಮತಗಟ್ಟೆಗಳಲ್ಲಿ ಬಿಡಿಸುವ ಚಿತ್ರಗಳಲ್ಲಿ ಚುನಾವಣೆ ನೀತಿ ಸಂಹಿತೆ ಉಲ್ಲಂಘನೆಯಾಗದಂತೆ ನೋಡಿಕೊಳ್ಳಬೇಕು. ಈ ನಿಟ್ಟಿನಲ್ಲಿ ಚಿತ್ರಗಳನ್ನು ಬಿಡಿಸುವ ಪೂರ್ವದಲ್ಲಿ ಸಂಬಂಧಿಸಿದ ವಿಧಾನಸಭಾ ಕ್ಷೇತ್ರಗಳ ಸಹಾಯಕ ಚುನಾವಣಾಧಿಕಾರಿಗಳ ಗಮನಕ್ಕೆ ತಂದು, ಅವರಿಂದ ಅನುಮತಿ ಪಡೆದ ಚಿತ್ರಗಳನ್ನು ಮಾತ್ರ ಮತಗಟ್ಟೆಗಳಲ್ಲಿ ಬಿಡಿಸಲು ಕ್ರಮವಹಿಸಬೇಕೆಂದು ನಿರ್ದೇಶನ ನೀಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಸಿ.ಬಿ. ದೇವರಮನಿ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಂ.ಎ. ರಡ್ಡೇರ, ವಿವಿಧ ಶಾಲೆಗಳ ಚಿತ್ರಕಲಾ ಶಿಕ್ಷಕರು ಹಾಜರಿದ್ದರು.

## ಕ್ರೀಡೆಗಳಿಂದ ವ್ಯಕ್ತಿತ್ವ ವಿಕಸನ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಕ್ರೀಡೆಗಳು ವ್ಯಕ್ತಿಗಳನ್ನು ದೈಹಿಕವಾಗಿ, ಮಾನಸಿಕವಾಗಿ ಸದೃಢಗೊಳಿಸುತ್ತವೆ. ಇದರಿಂದ ಕ್ರೀಡೆಯಲ್ಲಿ ತೊಡಗಿಸಿಕೊಳ್ಳುವ ಪ್ರತಿ ವ್ಯಕ್ತಿಯ ವ್ಯಕ್ತಿತ್ವವೂ ವಿಕಸನಗೊಳ್ಳುತ್ತದೆ ಎಂದು ಮುಖಂಡ ಸುರೇಶ ಶಿರೋಳ ಹೇಳಿದರು.

ಸಮೀಪದ ಅಬ್ಬಿಗೇರಿಯ ಫ್ರೆಂಡ್ಸ್ ಸ್ಪೋರ್ಟ್ಸ್ ಕ್ಲಬ್ ಆಶ್ರಯದಲ್ಲಿ ಶ್ರೀ ಅನ್ನದಾನೇಶ್ವರ ಪ್ರೌಢಶಾಲೆ ಮೈದಾನದಲ್ಲಿ ನಡೆಯುತ್ತಿರುವ ಅಬ್ಬಿಗೇರಿ ಪ್ರೀಮಿಯರ್ ಲೀಗ್ ಪಂದ್ಯಾವಳಿಗೆ ಚಾಲನೆ ನೀಡಿ ಅವರು ಮಾತನಾಡಿದರು.

ಕ್ರೀಡೆಗಳಲ್ಲಿ ತೊಡಗಿಸಿಕೊಳ್ಳುವುದರಿಂದ ಸಾಮಾಜಿಕ ಪ್ರಜ್ಞೆ, ಸಾಮಾಜಿಕ ಜವಾಬ್ದಾರಿ ಬೆಳೆಯುತ್ತದೆ. ಭಾರತದಲ್ಲಿ ಕ್ರೀಡೆಗಳಿಗೆ ಹೆಚ್ಚು ಪ್ರಾಮುಖ್ಯತೆ ದೊರೆಯುತ್ತಿದೆ. ಕ್ರೀಡೆಗಳಲ್ಲಿ ತೊಡಗಿಕೊಳ್ಳುವವರು ವ್ಯಸನ ಮುಕ್ತರಾಗಿರಬೇಕು. ಅಂದಾಗ ಮಾತ್ರ ಅವರಲ್ಲಿ ಆಟದ ಕಡೆಗೆ ಏಕಾಗ್ರತೆ ಬರಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ವಿಜಯಕುಮಾರ ಇಟಗಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಬಸವರಾಜ ಪಲ್ಲೇದ, ರವಿ ಮುಗಳಿ, ಅನಿಲ ನವಲಗುಂದ, ಇಸ್ಮಾಯಿಲ್ ಕೋಟೇಕಲ್, ರಾಜು ಅವರೆಡ್ಡಿ, ಶಾಂಕರ ದ್ವಾಸಲ, ವೀರಣ್ಣ ಪಟ್ಟಣಶೆಟ್ಟಿ, ರಮೇಶ ಮಡಿವಾಳರ, ಪ್ರವೀಣ ಮಳಗಿ, ವಿಲಾಸ ಹಿರೇಮಠ, ಅಶೋಕ ಬಸವರಡ್ಡೇರ, ಅಶೋಕ ತೆ-ೂಟಗಂಟಿ, ಮಲ್ಲು ಗುಜಮಾಗಡಿ, ರವಿ ಸೊಲಗಿ, ಪ್ರಲ್ಹಾದ ಕಟಗೇರಿ, ಬವಸರಾಜ ಅಂಗಡಿ, ಮಹಾಂತೇಶ ನೀರಲೋಟಿ, ಬಸವರಾಜ ಮಲ್ಲಾಪೂರ, ಸುನೀಲ ಸೊಲಗಿ, ಮಲ್ಲು ಅವರೆಡ್ಡಿ, ಪ್ರಭು ಅವರೆಡ್ಡಿ, ಗಣೇಶ ಐಹೊಳಿ, ವಿಶ್ವನಾಥ ತಿಪಶೆಟ್ಟಿ, ತಾಯಪ್ಪ ದ್ವಾಸಲ ಮುಂತಾದವರು ಉಪಸ್ಥಿತರಿದ್ದರು.

## ಸರಕಾರಿ ಶಾಲೆಯ ಕಾರ್ಯ ಶ್ಲಾಘನೀಯ




■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಬೇಸಿಗೆ ಆರಂಭವಾಗುತ್ತಿದ್ದಂತೆ ನೀರಿನ ದಾಹ ಹೆಚ್ಚುತ್ತಿದ್ದು, ಬಿಸಿಲಿಗೆ ಬಸವಳಿದ ಜನರಿಗಾಗಿ ನಿತ್ಯ ಶುದ್ಧ ಕುಡಿಯುವ ನೀರಿನ ಅರವಟ್ಟಿಗೆ ಸ್ಥಾಪನೆ ಮಾಡಿರುವ ಕಾರ್ಯ ಶ್ಲಾಘನೀಯ ಎಂದು ಸಿಆರ್‌ಪಿ ಇಮಾಮಸಾಬ ಗಾಡಗೋಳಿ ಹೇಳಿದರು.

ಅವರು ಪಟ್ಟಣದ ಕಣವಿ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕ ವೃಂದದಿಂದ ಶುದ್ಧ ಕುಡಿಯುವ ನೀರಿನ ಅರವಟ್ಟಿಗೆ ಉದ್ಘಾಟಿಸಿ ಮಾತನಾಡಿ, ಬೇಸಿಗೆ ಇರುವುದರಿಂದ ನೀರಿಗಾಗಿ ಅಲೆದಾಡುವ ಸ್ಥಿತಿ ನಿರ್ಮಾಣವಾಗುತ್ತಿದೆ. ಈ ಸಂದರ್ಭದಲ್ಲಿ ಶಾಲೆಯ ಮಕ್ಕಳಿಗೆ ಹಾಗೂ ಶಾಲೆಯ ಮುಂಭಾಗದಲ್ಲಿ ಸಾರ್ವಜನಿಕರಿಗಾಗಿ ಶುದ್ಧ ಕುಡಿಯುವ ನೀರಿನ ಅರವಟ್ಟಿಗೆ ಸ್ಥಾಪಿಸಿ ನೀರಿನ ದಾಹ ನೀಗಿಸುತ್ತಿರುವ ಈ ಕಾರ್ಯ ನಿಜಕ್ಕೂ ಶ್ಲಾಘನೀಯ ಎಂದರು.

ಶಾಲಾ ಪ್ರಧಾನ ಗುರುಮಾತೆ ಎಲ್.ಪಿ. ಕಟ್ಟಿಮನಿ, ಆರ್.ಬಿ. ಕಟ್ಟಿಮನಿ, ಎಸ್.ಎಚ್. ಹೊಸಮನಿ, ಎನ್.ವಿ. ಗಿರಿರಡ್ಡಿ, ಟಿ.ಆರ್. ಹೊಂಬಳ, ರತ್ನಾ ಗುಂಜಳ, ವಾಯ್.ಬಿ. ಗೋವಣ್ಣವರ ಇದ್ದರು.

## ಸಂವಿಧಾನಾತ್ಮಕ ಹಕ್ಕನ್ನು ತಪ್ಪದೇ ಚಲಾಯಿಸಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪ್ರಜಾಪ್ರಭುತ್ವ ಯಶಸ್ಸಿಗೆ ಕಡ್ಡಾಯವಾಗಿ ಮತದಾನವನ್ನು ಮಾಡುವುದು ಅತ್ಯವಶ್ಯ. ಸಂವಿಧಾನವು ಪ್ರತಿಯೊಬ್ಬ ಪ್ರಜೆಗೆ ಮತದಾನವನ್ನು ಮಾಡುವ ಹಕ್ಕು ನೀಡಿದೆ ಎಂದು ಶಿಗ್ಲಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ರವಿ ಕೊರಕನವರ ಹೇಳಿದರು.

ಲೋಕಸಭಾ ಸಾರ್ವತ್ರಿಕ ಚುನಾವಣೆ ಲಕ್ಷ್ಮೇಶ್ವರ ತಾಲೂಕು ಶಿಗ್ಲಿ ಗ್ರಾಮದಲ್ಲಿಯ ವಲಸೆ ಯಾಕ್ರೀ, ನಿಮ್ಮೂರಲ್ಲೆ ಉದ್ಯೋಗ ಖಾತ್ರಿ ಅಭಿಯಾನದ ಸಮುದಾಯ ಕಾಮಗಾರಿ ಸ್ಥಳದಲ್ಲಿ ಏರ್ಪಡಿಸಿದ್ದ ಮತದಾರರ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಎಲ್ಲ ಅರ್ಹ ನಾಗರಿಕರು ಕಡ್ಡಾಯವಾಗಿ ಮತದಾನ ಮಾಡುವುದರಿಂದ ಮಾತ್ರ ಸದೃಢ ಪ್ರಜಾಪ್ರಭುತ್ವ ಕಟ್ಟಲು ಸಾಧ್ಯ. ಆ ದಿಸೆಯಲ್ಲಿ ಸಂವಿಧಾನಾತ್ಮಕ ಹಕ್ಕಾದ ಮತದಾನ ಕಾರ್ಯದಲ್ಲಿ ತಪ್ಪದೇ ಎಲ್ಲರೂ ಪಾಲ್ಗೊಳ್ಳುವಂತಾಗಬೇಕು. ಮೇ 7ರಂದು ಲೋಕಸಭೆ ಚುನಾವಣೆಗೆ ಮತದಾನ ಜರುಗಲಿದ್ದು, ಕುಟುಂಬದ ಎಲ್ಲ ಸದಸ್ಯರೊಂದಿಗೆ ಭಾಗಿಯಾಗುವಂತೆ ತಿಳಿಸಿದರು. ಈ ಬೇಸಿಗೆ ಅವಧಿಯಲ್ಲಿ ಹೆಚ್ಚು ಕೆಲಸ ಒದಗಿಸಲು ನರೇಗಾ ಯೋಜನೆಯಡಿ ಸಮುದಾಯ ಕಾಮಗಾರಿ ಆರಂಭಿಸಲಾಗಿದ್ದು, ರೈತರು ಸದ್ಬಳಕೆ ಮಾಡಿಕೊಳ್ಳಬೇಕು ಎಂದರು.

ಗ್ರಾ.ಪಂ ಸಿಬ್ಬಂದಿ ಕವಿತಾ ಅಣ್ಣಿಗೇರಿ, ಎಸ್.ಡಿ. ಗೋಣೆಪ್ಪಮವರ, ಟಿಎಇ ವಿ.ಎಸ್. ಅಳವಂಡಿಮಠ, ಗ್ರಾ.ಪಂ ಸಿಬ್ಬಂದಿಗಳು, ಉದ್ಯೋಗ ಖಾತ್ರಿ ಕಾಯಕ ಬಂಧುಗಳು, ಕೂಲಿ ಕಾರ್ಮಿಕರು ಇದ್ದರು.

### ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ಸಭೆಯಲ್ಲಿ ಜಿಲ್ಲಾಧಿಕಾರಿ ದಿವ್ಯ ಪ್ರಭು

# ಹೆಚ್ಚುತ್ತಿರುವ ತಾಪಮಾನದ ಬಗ್ಗೆ ಜಾಗೃತಿ ಮೂಡಿಸಿ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಜಿಲ್ಲೆಯಲ್ಲಿ ದಿನದಿಂದ ದಿನಕ್ಕೆ ತಾಪಮಾನ ಹೆಚ್ಚಳವಾಗುತ್ತಿದ್ದು, ಸಾರ್ವಜನಿಕರ ಆರೋಗ್ಯದ ಹಿತದೃಷ್ಟಿಯಿಂದ ಇದರ ಬಗ್ಗೆ ಅರಿವು, ಸುರಕ್ಷತಾ ಕ್ರಮಗಳ ಬಗ್ಗೆ ಜಾಗೃತಿ ಮೂಡಿಸಬೇಕೆಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರೂ ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಹೇಳಿದರು.

ಅವರು ಶುಕ್ರವಾರ ಬೆಳಿಗ್ಗೆ ಜಿಲ್ಲಾಧಿಕಾರಿಗಳ ಕಚೇರಿಯ ನೂತನ ಸಭಾಂಗಣದಲ್ಲಿ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆ ಜರುಗಿಸಿ, ಕುಡಿಯುವ ನೀರು, ಜಾನುವಾರು ಮೇವು, ನರೇಗಾ ಉದ್ಯೋಗ ನೀಡುತ್ತಿರುವ ಬಗ್ಗೆ ಪ್ರಗತಿ ಪರಿಶೀಲಿಸಿ ಮಾತನಾಡಿದರು.

ಪ್ರಸ್ತುತ ದಿನದವರೆಗೆ ಜಿಲ್ಲೆಯ 37 ಗ್ರಾಮಗಳಿಗೆ 58 ಖಾಸಗಿ ಕೊಳವೆ ಬಾವಿಗಳ ಮೂಲಕ ಕುಡಿಯುವ ನೀರು ಸರಬರಾಜು ಮಾಡಲಾಗುತ್ತಿದೆ. ಮುಂದಿನ ದಿನಗಳಲ್ಲಿ ಮತ್ತೆ ಯಾವುದೇ ಗ್ರಾಮದಲ್ಲಿ ನೀರಿನ ಸಮಸ್ಯೆ ಉಂಟಾದಲ್ಲಿ ತಕ್ಷಣ ಕ್ರಮ ಕೈಗೊಳ್ಳಲು ಸಿದ್ಧತೆ ಮಾಡಿಕೊಳ್ಳಲಾಗಿದೆ. ಬೋರವೆಲ್, ಪೈಪ್‌ಲೈನ್, ಖಾಸಗಿ ಕೊಳವೆ ಬಾವಿ ಬಾಡಿಗೆ ಪಡೆಯಲು ಒಪ್ಪಂದವೂ ಆಗಿದೆ. ಸಾರ್ವಜನಿಕರಲ್ಲಿ ನೀರಿನ ಮಿತ ಬಳಕೆ, ಅಪವ್ಯಯ, ಸೋರಿಕೆ ಬಗ್ಗೆ ಅರಿವು ಮೂಡಿಸಬೇಕೆಂದು ತಿಳಿಸಿದರು.

ನವಿಲುತೀರ್ಥ ಜಲಾಶಯದಿಂದ ಎಂ.ಆರ್.ಬಿ.ಸಿ ಕಾಲುವೆ ಮುಖಾಂತರ ಜಿಲ್ಲೆಯ ನವಲಗುಂದ -37, ಅಣ್ಣಿಗೇರಿ-13, ಹುಬ್ಬಳ್ಳಿ-07 ಮತ್ತು ಕುಂದಗೋಳ-01 ಸೇರಿ ಒಟ್ಟು 58 ಕುಡಿಯುವ ನೀರಿನ ಕೆರೆಗಳನ್ನು ತುಂಬಿಸಲಾಗಿದ್ದು, ಮೇ ತಿಂಗಳ ಅಂತ್ಯದವರೆಗೆ ಈ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಬಹುಶಃ ಉಂಟಾಗುವುದಿಲ್ಲ. ಕೆರೆಗಳ ನೀರಿನ ಸುರಕ್ಷತೆ ಮತ್ತು ಸ್ವಚ್ಛತೆ ಬಗ್ಗೆ ಅಧಿಕಾರಿಗಳು ಗಮನ ನೀಡಬೇಕೆಂದು ಜಿಲ್ಲಾಧಿಕಾರಿಗಳು ಹೇಳಿದರು.



**ವಿಫಲ ಕೊಳವೆ ಬಾವಿ ಮುಚ್ಚಿಸಿ**

ಪ್ರತಿ ತಿಂಗಳು ಪಂಚಾಯತರಾಜ್ ಮತ್ತು ಕಂದಾಯ ಇಲಾಖೆಯ ಅಧಿಕಾರಿಗಳು ಜಂಟಿಯಾಗಿ ತಮ್ಮ ವ್ಯಾಪ್ತಿಯ ಸಫಲ ಮತ್ತು ವಿಫಲ ಕೊಳವೆ ಬಾವಿಗಳ ಸಮೀಕ್ಷೆ ಮಾಡಿ ವರದಿ ನೀಡಲು ತಿಳಿಸಲಾಗಿದೆ. ಅದರಂತೆ ಈಗ ಬೇಸಿಗೆ ಕಾಲವಾಗಿರುವುದರಿಂದ ರೈತರು ಕೃಷಿ, ಕುಡಿಯುವ ನೀರಿಗಾಗಿ ಹೆಚ್ಚು ಹೆಚ್ಚು ಕೊಳವೆ ಬಾವಿ ತೋಡಿಸುತ್ತಾರೆ. ಅದರಲ್ಲಿ ನೀರು ಬಂದರೆ ಮೋಟಾರು ಇಳಿಸಿ ಬಳಕೆ ಮಾಡುತ್ತಾರೆ. ನೀರು ಬರದಿದ್ದಲ್ಲಿ ಹಾಗೆಯೇ ಬಿಟ್ಟು ಬಿಡುತ್ತಾರೆ. ಇದರಿಂದ ಮಕ್ಕಳ ಜೀವಕ್ಕೆ ಅಪಾಯದ ಸಾಧ್ಯತೆಯಿರುತ್ತದೆ. ವಿಫಲ ಕೊಳವೆ ಬಾವಿಗಳನ್ನು ಕಡ್ಡಾಯವಾಗಿ ಮುಚ್ಚಿಸುವುದು ತಹಸೀಲ್ದಾರ್ ಹಾಗೂ ತಾ.ಪಂ ಇ.ಓಗಳ ಕರ್ತವ್ಯವಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಜಿಲ್ಲೆಯಲ್ಲಿ ರೈತರಿಗೆ ಅಗತ್ಯಕ್ಕೆ ತಕ್ಕಂತೆ ಮೇವು ಪೂರೈಕೆ ಮಾಡಲಾಗುತ್ತಿದೆ. ಈಗಾಗಲೇ ಜಿಲ್ಲೆಯ 7 ಸ್ಥಳಗಳಲ್ಲಿ ಮೇವು ಬ್ಯಾಂಕ್ ತೆರೆಯಲಾಗಿದ್ದು, ರೈತರು ಮೇವು ಪಡೆದುಕೊಳ್ಳುತ್ತಿದ್ದಾರೆ. ಮೇ ತಿಂಗಳನ್ನು



ಗಮನದಲ್ಲಿಟ್ಟುಕೊಂಡು ರೈತರಿಂದ ಮೇವು ಬೇಡಿಕೆ ಅಂದಾಜಿಸಿ, ಈಗಲೇ ಮೇವು ಪೂರೈಕೆಗೆ ಕ್ರಮ ಕೈಗೊಳ್ಳಿ. ರೈತರು, ಪಶುಪಾಲಕರಿಗೆ ಹೆಚ್ಚು ತಾಪಮಾನ ಇರುವ ಈ ಸಂದರ್ಭದಲ್ಲಿ ಜಾನುವಾರು ಪಾಲನೆ ಮತ್ತು ಸುರಕ್ಷತೆ ಬಗ್ಗೆ ತಿಳುವಳಿಕೆ ನೀಡಿ ಅಗತ್ಯ ಔಷಧಿಗಳನ್ನು ಪೂರೈಸಿ ಎಂದು ಅವರು ಸೂಚಿಸಿದರು.

ಧಾರವಾಡ ಜಿಲ್ಲಾಡಳಿತದಿಂದ ಜೂನ್ ತಿಂಗಳವರೆಗೆ ಬರಬಹುದಾದ ಕುಡಿಯುವ ನೀರಿನ ಸಮಸ್ಯೆ, ಜಾನುವಾರು ಮೇವು ಕೊರತೆ ಅಂದಾಜಿಸಿ ಸಾಕಷ್ಟು ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಾಗಿದೆ. ರೈತರಿಗೆ, ಸಾರ್ವಜನಿಕರಿಗೆ ಸಮಸ್ಯೆಗಳಿದ್ದಲ್ಲಿ ಸಂಪರ್ಕಿಸಲು ಜಿಲ್ಲಾಧಿಕಾರಿಗಳ ಕಚೇರಿ, ತಹಸೀಲ್ದಾರ ಕಚೇರಿ ಮತ್ತು ತಾ.ಪಂಗಳಲ್ಲಿ ಸಹಾಯವಾಣಿ ಆರಂಭಿಸಲಾಗಿದೆ. ಈ ಎಲ್ಲಾ ಮಾಹಿತಿ ಜಿಲ್ಲೆಯ ಪ್ರತಿ ಗ್ರಾಮಗಳಿಗೆ ತಲುಪಬೇಕು ಎಂದರು.

ತಹಸೀಲ್ದಾರರು ಮತ್ತು ಪಶುಪಾಲನೆ ಅಧಿಕಾರಿಗಳು ಪ್ರತಿ ಜಾನುವಾರು ಮಾರುಕಟ್ಟೆಯಲ್ಲಿ ಅಭಿಯಾನ ಕುರಿತು ಹೆಚ್ಚು ಪ್ರಚಾರ ಮಾಡಬೇಕು. ಮಾರುಕಟ್ಟೆಗೆ ಬಂದಿರುವ ರೈತರನ್ನು ಮಾತನಾಡಿಸಿ, ಅವರಿಗೆ ಮಾಹಿತಿ ನೀಡಬೇಕು. ಧ್ವನಿವರ್ಧಕ ಬಳಸಿ ಮುಂಜಾಗ್ರತಾ ಕ್ರಮಗಳ ಬಗ್ಗೆ ವ್ಯಾಪಕ ಪ್ರಚಾರ ನೀಡಿ, ತಮ್ಮ ತಾಲೂಕಿನಲ್ಲಿ ಯಾವುದೇ ರೀತಿಯ ತೊಂದರೆ ಆಗದಂತೆ ನಿಗಾ ವಹಿಸಬೇಕೆಂದು ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ ಉಪಕಾರ್ಯದರ್ಶಿ ವಿಜಯಕುಮಾರ ಆಜೂರ, ಉಪವಿಭಾಗಾಧಿಕಾರಿ ಶಾಲಂ ಹುಸೇನ್, ಪಶುಪಾಲನೆ ಇಲಾಖೆಯ ನಿರ್ದೇಶಕ ಡಾ. ರವಿ ನಿಲಿಗೌಡರ್, ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಡಾ.ಕಿರಣಕುಮಾರ, ಮಹಾನಗರ ಪಾಲಿಕೆಯ ಅಧೀಕ್ಷಕ ಅಭಿಯಂತರ ತಿಮ್ಮಪ್ಪ, ಭೂದಾಖಲೆಗಳ ಉಪನಿರ್ದೇಶಕ ಮೋಹನ ಶಿವಣ್ಣವರ ಸೇರಿದಂತೆ ಎಲ್ಲಾ ತಾಲೂಕುಗಳ ತಹಸೀಲ್ದಾರರು, ತಾ.ಪಂ ಇ.ಓಗಳು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಗಳ ಅಧಿಕಾರಿಗಳು ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಭಾಗವಹಿಸಿದ್ದರು.

## ಡಾ. ಬಾಬು ಜಗಜೀವನ ರಾಂ ಜಯಂತಿ ಆಚರಣೆ



■ವಿಜಯಸಾಕ್ಷಿ ಸುದ್ದಿ, ಧಾರವಾಡ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಸಹಯೋಗದಲ್ಲಿ ಶುಕ್ರವಾರ ಬೆಳಿಗ್ಗೆ ಜಿಲ್ಲಾಧಿಕಾರಿಗಳ ಕಚೇರಿಯ ನೂತನ ಸಭಾಂಗಣದಲ್ಲಿ ಹಸಿರು ಕ್ರಾಂತಿಯ ಹರಿಕಾರ ಹಾಗೂ ಭಾರತದ ಮಾಜಿ ಉಪಪ್ರಧಾನಿ ಡಾ. ಬಾಬು ಜಗಜೀವನ ರಾಂ ಅವರ ಜಯಂತಿಯನ್ನು ಆಚರಿಸಲಾಯಿತು.

ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಭಾರತದ ಮಾಜಿ ಉಪಪ್ರಧಾನಿ ಡಾ. ಬಾಬು ಜಗಜೀವನ ರಾಮರ ಭಾವಚಿತ್ರಕ್ಕೆ ಪುಷ್ಪಾರ್ಪಣೆ ಸಲ್ಲಿಸಿ, ನಮಿಸಿದರು.

ಲೋಕಸಭಾ ಚುನಾವಣೆ ಹಿನ್ನಲೆಯಲ್ಲಿ ಜಯಂತಿ ಕಾರ್ಯಕ್ರಮವನ್ನು ಸರಳವಾಗಿ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಪೊಲೀಸ್ ಅಧೀಕ್ಷಕ ಗೋಪಾಲ ಎಂ.ಬ್ಯಾಕೋಡ, ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ., ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕಿ ಪಿ.ಶುಭಾ ಹಾಗೂ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ವಿವಿಧ ಸಮಾಜ ಗಣ್ಯರು, ಹಿರಿಯ ನಾಗರಿಕರು, ಸಾರ್ವಜನಿಕರು ಉಪಸ್ಥಿತರಿದ್ದರು.

ಮಾಜಿ ಉಪ ಪ್ರಧಾನಿ ಡಾ.ಬಾಬು ಜಗಜೀವನ ರಾಂ ಅವರ ಜಯಂತಿ ಹಿನ್ನಲೆಯಲ್ಲಿ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಮಹಾನಗರ ಪಾಲಿಕೆ ಹತ್ತಿರದಲ್ಲಿರುವ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಮತ್ತು ಕಲಾಭವನ ಆವರಣದಲ್ಲಿರುವ ಶ್ರೀ ಬಸವೇಶ್ವರರ ಪುತ್ಥಳಿಗೆ ಮಾಲಾರ್ಪಣೆ ಮಾಡಿದರು. ಈ ಸಂದರ್ಭದಲ್ಲಿ ಜಿಲ್ಲಾ ಪೊಲೀಸ್ ಅಧೀಕ್ಷಕ ಡಾ.ಗೋಪಾಲ ಬ್ಯಾಕೋಡ, ಉಪ ಪೊಲೀಸ್ ಆಯುಕ್ತರಾದ ರವೀಶ್ ಸಿ.ಆರ್, ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ., ಜೆಡಿ ಪಿ.ಶುಭಾ ಹಾಗೂ ಇತರರು ಇದ್ದರು.




■ವಿಜಯಸಾಕ್ಷಿ ಸುದ್ದಿ, ಧಾರವಾಡ

## ಬಾಬೂಜಿ ಮಹಾನ್ ಸಮಾಜ ಸೇವಕರು



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಬಾಬೂಜಿ ಎಂದು ಖ್ಯಾತರಾದ ಜಗಜೀವನ ರಾಮ್ ಸ್ವಾತಂತ್ರ ಹೋರಾಟಗಾರರಷ್ಟೇ ಅಲ್ಲದೆ, ಸಮಾಜ ಸೇವಕರೂ ಆಗಿದ್ದರು. ಆ ಕಾಲದಲ್ಲಿ ಭಾರತದ ಉಪ ಪ್ರಧಾನಿಯೂ ಆಗಿದ್ದರು. ಜಗಜೀವನ ರಾಮ್‌ರವರು ಅಸ್ಪೃಶ್ಯತಾ ನಿವಾರಣೆಯ ಹೋರಾಟದ ಮಹಾನ್ ನಾಯಕರಾಗಿದ್ದು ಎಂದು ಮುಖ್ಯೋಪಾಧ್ಯಾಯ ಬಿ.ಎಮ್. ಕುಂಬಾರ ಹೇಳಿದರು.

ಅವರು ಇಲ್ಲಿನ ಸರಕಾರಿ ಮಾದರಿ ಹೆಣ್ಣು ಮಕ್ಕಳ ಶಾಲೆಯಲ್ಲಿ ಹಮ್ಮಿಕೊಂಡಿದ್ದ ಡಾ.ಬಾಬು ಜಗಜೀವನ ರಾಮ್ ಅವರ ಜಯಂತಿ ಆಚರಿಸಿ ಮಾತನಾಡಿದರು. ಬಿಆರ್‌ಪಿ ಈಶ್ವರ ಮೆಡ್ಲೇರಿ, ಬಸವರಾಜ ಯರಗುಪ್ಪಿ, ಸಿಆರ್‌ಪಿಗಳಾದ ಸತೀಶ ಬೊಮಲೆ, ಉಮೇಶ ನೇಕಾರ, ಆರ್.ಎಂ. ಶಿರಹಟ್ಟಿ, ಎಚ್.ಡಿ. ನಿಂಗರೆಡ್ಡಿ, ಎಸ್.ಸಿ. ಕಾಳೆ, ಆರ್. ಕೆ. ಉಪನಾಳ, ಐ.ಆರ್. ಕುಲಕರ್ಣಿ, ಬಿ.ಬಿ. ಹುಲಗೂರ, ವಿ.ವಿ. ಗೊಲ್ಲರ, ಎನ್.ಪಿ. ಪ್ಯಾಟಿಗೌಡರ, ಡಾ.ಶಿವಾನಂದ ಹೂವಿನ, ಐ.ಎಸ್. ಮಡಿವಾಳರ ಹಾಗೂ ಶಾಲಾ ಮಕ್ಕಳು ಹಾಜರಿದ್ದರು.

## ಜಿಲ್ಲಾ ನೇಕಾರ ಪ್ರಕೋಷ್ಠ ಸಂಚಾಲಕರಾಗಿ ಅನಿಲ ಗಡ್ಡಿ ನೇಮಕ

■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಜನತಾ ಪಾರ್ಟಿ ಗದಗ ಜಿಲ್ಲಾ ನೇಕಾರ ಪ್ರಕೋಷ್ಠದ ಜಿಲ್ಲಾ ಸಂಚಾಲಕರನ್ನಾಗಿ ನಗರದ ಬೆಟಗೇರಿ ಭಾಗದ ಪ್ರಮುಖರಾದ ಅನಿಲ ಗಡ್ಡಿಯವರನ್ನ ನೇಮಕ ಮಾಡಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ, ಪ್ರಕೋಷ್ಠಗಳ ಜಿಲ್ಲಾ ಸಂಯೋಜಕ ಶಶಿಧರ ದಿಂಡೂರ, ಸಹ-ಸಂಯೋಜಕ ರಮೇಶ ಸಜ್ಜಗಾರ, ಗದಗ ನಗರ ಮಂಡಲ ಅಧ್ಯಕ್ಷ ಅನಿಲ ಅಬ್ಬಿಗೇರಿ, ರಾಜು ಹೊಂಗಲ,



ದಶರಥ ಕೊಳ್ಳಿ, ರಾಘವೇಂದ್ರ ಯಳವತ್ತಿ ಸೇರಿದಂತೆ ಹಲವಾರು ಪ್ರಮುಖರು ಉಪಸ್ಥಿತರಿದ್ದರು.


### ತಹಸೀಲ್ದಾರ ಕಚೇರಿಯಲ್ಲಿ ಬಾಬು ಜಗಜೀವನರಾಮ್ ಜಯಂತ್ಯುತ್ಸವ ಆಚರಣೆ

# ಜಗಜೀವನರಾಮರ ದೇಶ ಸೇವೆ ಸ್ಮರಣೀಯ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಹಸಿರು ಕ್ರಾಂತಿಯ ಹರಿಕಾರ, ರಾಷ್ಟ್ರನಾಯಕ, ಭಾರತದ ಮಾಜಿ ಉಪಪ್ರಧಾನಿ ಡಾ.ಬಾಬು ಜಗಜೀವನರಾಂ ಅವರ ಆದರ್ಶ, ಚಿಂತನೆಗಳು, ದೇಶ ಸೇವೆ ಸದಾ ಸ್ಮರಣೀಯ. ಅವರ ಶ್ರೇಷ್ಠ ವ್ಯಕ್ತಿತ್ವ ಹಾಗೂ ಜೀವನ ಚರಿತ್ರೆಯನ್ನು ಯುವ ಪೀಳಿಗೆಗೆ ಪರಿಚಯಿಸಬೇಕಾಗಿದೆ ಎಂದು ತಹಸೀಲ್ದಾರ ವಾಸುದೇವ ಎಂ ಸ್ವಾಮಿ ಅಭಿಪ್ರಾಯ ವ್ಯಕ್ತಪಡಿಸಿದರು.

ಅವರು ಪಟ್ಟಣದ ತಹಸೀಲ್ದಾರ ಕಚೇರಿಯಲ್ಲಿ ಶುಕ್ರವಾರ ಮಾಜಿ ಉಪಪ್ರಧಾನಿ, ಅಪ್ರತಿಮ ದೇಶಭಕ್ತ ಬಾಬು ಜಗಜೀವನರಾಮ್ ಅವರ ಜಯಂತ್ಯುತ್ಸವ ಸಮಾರಂಭದ




ಅಂಗವಾಗಿ ಕಾರ್ಯಾಲಯದಲ್ಲಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಪುಷ್ಪ ನಮನ ಸಲ್ಲಿಸಿ ಮಾತನಾಡಿದರು.

ಬಾಬು ಜಗಜೀವನ್ ರಾಮ್ ಅವರು ತಮ್ಮ ಆಡಳಿತ ಅವಧಿಯಲ್ಲಿ ಮಾಡಿದ ದೇಶ ಸೇವೆ ಅವರನ್ನು ಸದಾ ಸ್ಮರಿಸುವಂತೆ ಮಾಡಿದೆ. ಬುದ್ಧ, ಬಸವ ವಿಚಾರಧಾರೆಗಳೊಂದಿಗೆ ಪ್ರೇರಿತರಾದ ಅವರು, ದೇಶದ ಕಟ್ಟಕಡೆಯ ಸಮುದಾಯದ ಹಿತರಕ್ಷಣೆಗಾಗಿ ಶ್ರಮಿಸಿದವರು. ಕೃಷಿ ಕ್ಷೇತ್ರದಲ್ಲಿ ಅನೇಕ ವೈಜ್ಞಾನಿಕ ಬದಲಾವಣೆಗಳ ಮೂಲಕ ದೇಶದ ಆಹಾರ ಸಮಸ್ಯೆ ನಿವಾರಿಸುವ ಮಹತ್ವದ ನಿರ್ಣಯ ಇವರನ್ನು ಅಜಾರಾಮರಗೊಳ್ಳುವಂತೆ ಮಾಡಿದೆ.

ಸ್ವಾತಂತ್ರ್ಯೋತ್ತರ ಭಾರತದಲ್ಲಿ ಆಹಾರ ಕೊರತೆ ಎದುರಾದಾಗ ಸುಧಾರಿತ ಬಿತ್ತನೆ ಬೀಜ ಹಾಗೂ ಸುಧಾರಿತ ತಳಿಗಳನ್ನು ಅಳವಡಿಸಿಕೊಂಡು ಪರಿಸ್ಥಿತಿಯನ್ನು ಸಮರ್ಥವಾಗಿ ಎದುರಿಸಿ, ಹಸಿರುಕ್ರಾಂತಿಯ ಹರಿಕಾರ ಎಂದೇ ಖ್ಯಾತರಾಗಿದ್ದಾರೆ. ಇಂತಹ ನಾಯಕರ ಜೀವನಶೈಲಿ ಮತ್ತು ಆಡಳಿತ ವ್ಯವಸ್ಥೆಯನ್ನು ಇಂದಿನ ಯುವಕರು ಅಳವಡಿಸಿಕೊಳ್ಳುವ ಅಗತ್ಯವಿದೆಂದು ಹೇಳಿದರು.

ಈ ಸಂದರ್ಭದಲ್ಲಿ ಗ್ರೇಡ್-2 ತಹಸೀಲ್ದಾರ ಮಂಜುನಾಥ ಅಮಾಸಿ, ಉಪತಹಸೀಲ್ದಾರ ಪ್ರಶಾಂತ ಕಿಮಾಯಿ, ಪಶುವೈದ್ಯಾಧಿಕಾರಿ ಡಾ. ನೀಲಕಂಠ ಹವಳದ, ಸಮಾಜ ಕಲ್ಯಾಣ ಇಲಾಖೆ ವ್ಯವಸ್ಥಾಪಕ ಎಂ.ಎಸ್. ಸಂಕನೂರ, ತೋಟಗಾರಿಕೆ ಇಲಾಖೆಯ ಶಿವಾನಂದ ಬಾನಿ, ಸಮಾಜ ಕಲ್ಯಾಣ ಇಲಾಖೆಯ ಸೀಮಾ ಮಡಿವಾಳರ, ಬಸವರಾಜ ಹಡಪದ, ಕೆ.ಎಸ್. ತಳವಾರ, ಕಂದಾಯ ನಿರೀಕ್ಷಕ ಬಿ.ಎಂ. ಕಾತ್ರಾಳ, ಮುಖಂಡರಾದ ರಾಜು ಓಲೇಕಾರ, ದೊಡ್ಡಪ್ಪ ಓಲೇಕಾರ, ರಾಜರತ್ನ ಹುಲಗೂರ ಹಾಗೂ ತಾಲೂಕಿನ ವಿವಿಧ ಇಲಾಖೆ ಅಧಿಕಾರಿಗಳು ಹಾಜರಿದ್ದರು.

## ದುಡಿಯುವ ಕೈಗಳಿಗೆ ನರೇಗಾದಿಂದ ಬಲ



■ವಿಜಯಸಾಕ್ಷಿ ಸುದ್ದಿ, ರೋಣ

ಏಪ್ರಿಲ್ ಮತ್ತು ಮೇ ತಿಂಗಳ ಅವಧಿಯಲ್ಲಿ ನಮ್ಮ ಗ್ರಾಮದಲ್ಲಿ ನರೇಗಾ ಕೆಲಸಗಳನ್ನು ನಿಡಲಾಗುತ್ತಿದ್ದು, ಗ್ರಾಮ ಪಂಚಾಯಿತಿ ಸಿಬ್ಬಂದಿಗಳು, ನರೇಗಾ ಸಿಬ್ಬಂದಿಗಳು ಹಾಗೂ ಕಾಯಕ ಬಂಧುಗಳು ಆಸಕ್ತಿಯಿಂದ ಶ್ರಮಿಸಬೇಕೆಂದು ಹುಲ್ಲೂರು ಗ್ರಾ.ಪಂ ಅಭಿವೃದ್ಧಿ ಅಧಿಕಾರಿ ಈರಣ್ಣ ಪತ್ತಾರ ಹೇಳಿದರು.

ಹುಲ್ಲೂರ ಗ್ರಾ.ಪಂ ಸಭಾಭವನದಲ್ಲಿ ನಡೆದ ಕಾಯಕ ಬಂಧುಗಳ ಸಭೆಯನ್ನು ಉದ್ದೇಶಿಸಿ ಮಾನಾಡಿದ ಅವರು, ಮುಂಗಾರು ಮಳೆ ಆರಂಭವಾಗುವ ಮುನ್ನವೇ ಕೂಲಿಕಾರರಿಗೆ ಕೆಲಸ ನೀಡಿ ಗ್ರಾಮ ಪಂಚಾಯಿತಿಗೆ ಕೊಟ್ಟ ನಿಗದಿತ ಗುರಿ ಸಾಧನೆಗೆ ಒತ್ತು ನೀಡುವ ಉದ್ದೇಶ ಹೊಂದಿದ್ದೇವೆ. ದಿನದಿಂದ ದಿನಕ್ಕೆ ಬಿಸಿಲಿನ ತಾಪ ಹೆಚ್ಚುತ್ತಿದ್ದು, ನರೇಗಾ ಕೆಲಸಕ್ಕೆ ಬರುವ ಕೂಲಿಕಾರರಿಗೆ ಯಾವುದೇ ತೊಂದರೆಯಾಗದಂತೆ ಕಾಮಗಾರಿ ಸ್ಥಳದಲ್ಲಿ ನೆರಳು, ಕುಡಿಯುವ ನೀರು ಮತ್ತು ಪ್ರಥಮ ಚಿಕಿತ್ಸೆ ವ್ಯವಸ್ಥೆಯನ್ನು ಗ್ರಾ.ಪಂ ವತಿಯಿಂದ ಮಾಡಲಾಗುತ್ತಿದೆ ಎಂದರು.

ದುಡಿಯುವ ಕೈಗಳನ್ನು ನರೇಗಾ ಕೆಲಸ ನೀಡಿ ಬಲಪಡಿಸಬೇಕು. ಬೇಸಿಗೆ ಅವಧಿಯಲ್ಲಿ ಕೃಷಿ ಚಟುವಟಿಕೆಗಳ ಇಲ್ಲದಿರುವುದರಿಂದ ನರೇಗಾ ಕೆಲಸದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಕೂಲಿಕಾರರು ಭಾಗವಹಿಸುತ್ತಾರೆ. ಯೋಜನೆಯಡಿ ಬರುವ ಕೂಲಿಕಾರರಿಗೆ ಸರಿಯಾದ ರೀತಿಯಲ್ಲಿ ಕಾಯಕ ಬಂಧುಗಳು ಸ್ಪಂದಿಸಿ ಎಂದು ತಿಳಿ ಹೇಳಿದರು.

ಈ ಸಂದರ್ಭದಲ್ಲಿ ಗ್ರಾ.ಪಂ, ಬಿಎಫ್‌ಟಿ, ಗ್ರಾಮ ಕಾಯಕ ಮಿತ್ರರು, ಕಾಯಕ ಬಂಧುಗಳು ಪಾಲ್ಗೊಂಡಿದ್ದರು.

### ಶಿವಾನುಭವ, ಜ. ರೇಣುಕ ಜಯಂತಿ ನಿಮಿತ್ತ ಉಪನ್ಯಾಸ ಕಾರ್ಯಕ್ರಮ

## ರೇಣುಕರು ಸಾಮಾಜಿಕ ಕ್ರಾಂತಿಯ ಹರಿಕಾರರು

■ವಿಜಯಸಾಕ್ಷಿ ಸುದ್ದಿ, ಗದಗ

ಜಗದ್ಗುರು ರೇಣುಕಾಚಾರ್ಯರು ಕೇವಲ ಆಧ್ಯಾತ್ಮ ಪುರುಷರಷ್ಟೇ ಅಲ್ಲ, ಬದಲಾಗಿ ಸಾಮಾಜಿಕ ಕ್ರಾಂತಿಯ ಹರಿಕಾರರು. ಕೃತಯುಗ, ತ್ರೇತಾಯುಗ, ದ್ವಾಪರಯುಗ, ಕಲಿಯುಗ ಹೀಗೆ ಯುಗ-ಯುಗಗಳಲ್ಲೂ ಒಂದೊಂದು ಹೆಸರಿನಿಂದ ಭೂಲೋಕವನ್ನು ಉದ್ಧರಿಸಿದ ರೇಣುಕರು ತೆಲಂಗಾಣದ ಕೊಲ್ಲಿ ಪಾಕಿಯಲ್ಲಿ ಸಾಮಾಜಿಕ ನ್ಯಾಯದಡಿಯಲ್ಲಿ ನಾಗರಿಕತೆ ಬೆಳೆಯುವ ಮುನ್ನವೇ ಕಾಯಕದ ಆಧಾರದ ಮೇಲೆ ಕುಲ ಹದಿನೆಂಟಕ್ಕೂ ಮಠಗಳನ್ನು ಸ್ಥಾಪನೆ ಮಾಡಿ ಸಮಾನತೆಯ ಸೂತ್ರ ಕಂಡವರಾಗಿದ್ದರು ಎಂದು ಪತ್ರಕರ್ತ ಆನಂದಯ್ಯ ವಿರಕ್ತಮಠ ಅಭಿಪ್ರಾಯಪಟ್ಟರು.

ನಗರದ ಮುಳಗುಂದ ನಾಕಾ ಬಳಿಯ ಅಡವೀಂದ್ರ ಸ್ವಾಮಿ ಮಠದಲ್ಲಿ ನಡೆದ 332ನೇ ಶಿವಾನುಭವ ಹಾಗೂ ಜಗದ್ಗುರು ರೇಣುಕ ಜಯಂತಿ ನಿಮಿತ್ತ ಹಮ್ಮಿಕೊಳ್ಳಲಾಗಿದ್ದ ಉಪನ್ಯಾಸ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಜೊತೆಗೆ ಮಾನವರ ಉನ್ನತಿಕರಣಕ್ಕೆ ಶಿಕ್ಷಣ ಅವಶ್ಯ ಎಂಬುದನ್ನು ಅರಿತ ಅವರು, ಊರಿಗೊಂದು ಸಾಲಿಮಠ, ಗುರುಮಠ, ಆರೋಗ್ಯಕ್ಕಾಗಿ ವೈದ್ಯಮಠ ಹೀಗೆ ಹತ್ತಾರು ಮಠಗಳನ್ನು ಸ್ಥಾಪಿಸಿ ತಿರುಕೊಂಡು ಬಂದು ಕರಕೊಂಡು ಉಣ್ಣುವುದನ್ನು ಕಲಿಸಿಕೊಟ್ಟವರು.



ಧರ್ಮ ಸಂರಕ್ಷಣೆಗಾಗಿ ಐದು ಪೀಠಗಳ ಜೊತೆಗೆ ಊರಿಗೊಬ್ಬ ಶಿವಾಚಾರ್ಯ ಸ್ವಾಮಿಗಳನ್ನು ನೇಮಿಸಿ ಧರ್ಮ ಸಂರಕ್ಷಣೆ ಮಾಡಿ, ಯಾವ ಜಾತಿ-ಕುಲ-ಗೋತ್ರ ನೋಡದೇ ಸರ್ವರ ಅಭಿವೃದ್ಧಿ ಮಂತ್ರ ಪಠಿಸಿದ ಅವರು ಮಾನವ ಧರ್ಮಕ್ಕೆ ಜಯವಾಗಲಿ, ಧರ್ಮದಿಂದಲೇ ವಿಶ್ವಕ್ಕೆ ಶಾಂತಿ ಎಂಬ ಸಂದೇಶ ಸಾರಿದರು.

ವೀರಶೈವರು ವಿರೋಧ ರಹಿತರು, ವಿಕಾರ ರಹಿತರಾಗಿರಬೇಕು ಎಂಬುದನ್ನು ಅಗಸ್ತ್ಯ ಮಹರ್ಷಿಗಳ ಹಾಗೂ ಜಗದ್ಗುರು ರೇಣುಕರ ನಡುವೆ ನಡೆಯುವ ಸಂವಾದವನ್ನು ಒಳಗೊಂಡ ಶ್ರೀ ಸಿದ್ಧಾಂತ ಶಿಖಾಮಣಿಯ 101 ಸ್ಥಲಗಳಲ್ಲಿ ಕಾಣಬಹುದು ಎಂದರು.

ಡಾ. ಜಿ.ಎಸ್. ಹಿರೇಮಠ ಮಾತನಾಡಿ, ರೇಣುಕರು ಮಾಡಿದ ಧರ್ಮಕಾರ್ಯ ನಮಗೆಲ್ಲ ಆದರ್ಶವಾಗಿದ್ದು, ನಾವೆಲ್ಲ ಅವರ ಬಗ್ಗೆ ಓದಿದಾಗ ಮಾತ್ರ ಅವರ ಚರಿತ್ರೆ ಸಂಪೂರ್ಣವಾಗಿ ಅರ್ಥವಾಗುತ್ತದೆ ಎಂದರು. ಸಾನಿಧ್ಯವಹಿಸಿದ್ದ ಹಿರೇವಡ್ಡಟ್ಟಿ ಹಿರೇಮಠದ ಮಲ್ಲಿಕಾರ್ಜುನ ಶಿವಾಚಾರ್ಯರು, ರೇಣುಕರು ಜಗತ್ತಿಗೆ ಬಹುದೊಡ್ಡ ಧರ್ಮಸಂಸ್ಕಾರ ನೀಡಿದ ಧರ್ಮ ಸಂಸ್ಥಾಪಾನಾಚಾರ್ಯರು ಎಂದು ಕೊಂಡಾಡಿದರು.

ಈ ಸಂದರ್ಭದಲ್ಲಿ ಅತಿಥಿಗಳಾಗಿ ಆಗಮಿಸಿದ್ದ ಪ್ರಭಯ್ಯ ದಂಡಾವತಿಮಠ, ಪ್ರಸಾದ ಸೇವೆಗೈದ ಹಿರಿಯ ವಕೀಲರಾದ ಮುಧೋಳ ಸೇರಿದಂತೆ ಅನೇಕರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದ ನೇತೃತ್ವವನ್ನು ಅಡವೀಂದ್ರ ಸ್ವಾಮಿಗಳ ಮಠದ ಧರ್ಮಾಧಿಕಾರಿ ವೇ. ಮೂ ಮಹೇಶ್ವರ ಸ್ವಾಮೀಜಿ ವಹಿಸಿದ್ದರು. ವಿನಾಯಕ ಸಜ್ಜನ ಸ್ವಾಗತಿಸಿದರು, ಯು.ಆರ್. ಭೂಸನೂರಮಠ ನಿರೂಪಿಸಿದರು. ಪ್ರಕಾಶ ಬಂಡಿ ವಂದಿಸಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಪ್ರೊ. ಕೆ.ಹೆಚ್. ಬೇಲೂರ ಮಾತನಾಡಿ, ಬೇಂದ್ರೆಯವರ ನಕ್ಕು ನಗಿಸುವುದೇ ಸ್ವರ್ಗ ಎಂಬ ವಿಚಾರ ಕುರಿತಾಗಿ ಮಾತನಾಡಿದರಲ್ಲದೇ, ಅಡವೀಂದ್ರ ಸ್ವಾಮಿಗಳಮಠದ ಶಿವಾನುಭವ ಬದುಕಿಗೆ ಎಷ್ಟೊಂದು ನೆಮ್ಮದಿ ತರಬಲ್ಲುದು ಎಂಬುದನ್ನು ಪ್ರಾಸಂಗಿಕವಾಗಿ ವಿವರಿಸಿ, ಎಲ್ಲ ಧರ್ಮಗಳು ಒಂದನ್ನೇ ಹೇಳಿವೆ. ಹಾಗಾಗಿ ನಾವೆಲ್ಲ ಒಂದಾಗಿ, ಚೆಂದಾಗಿ ಇರಬೇಕೆಂದು ಹೇಳಿದರು.

## ಯುಗಾದಿ, ರಂಜಾನ್ ಸಾಲು ಸಾಲು ರಜೆ; ಹೆಚ್ಚುವರಿ ಬಸ್ ವ್ಯವಸ್ಥೆ!

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಯುಗಾದಿ ಮತ್ತು ರಂಜಾನ್ ಗೆ ರಜೆ ಇರುವ ಕಾರಣ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ವಿವಿಧ ಊರುಗಳಿಗೆ 2000ಕ್ಕೂ ಹೆಚ್ಚು ವಿಶೇಷ ಬಸ್‌ಗಳ ವ್ಯವಸ್ಥೆ ಮಾಡಿದೆ.

ಒಟ್ಟು 2275 ವಿಶೇಷ ಬಸ್‌ಗಳನ್ನು ರಸ್ತೆಗಿಳಿಸಲು ನಾಲ್ಕು ನಿಗಮಗಳು ನಿರ್ಧರಿಸಿದ್ದು, ರಜೆ ಹಿನ್ನೆಲೆ ಊರಿಗೆ ಹಾಗೂ ಪ್ರವಾಸಕ್ಕೆ ತೆರಳುವವರಿಗೆ ಅನುಕೂಲವಾಗಲಿದೆ.

## ಡಾ.ಬಾಬು ಜಗಜೀವನರಾಂ ಜಯಂತ್ಯುತ್ಸವ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಡಾ. ಬಾಬು ಜಗಜೀವನರಾಂ ಅವರು ಸೃಷ್ಟಿಸಿದ ಹಸಿರು ಕ್ರಾಂತಿಯಿಂದ ದೇಶದಲ್ಲಿ ಬಡವರಿಗೆ ಆಹಾರದ ಕೊರತೆ ದೂರವಾಯಿತು. ಹಸಿರು ಕ್ರಾಂತಿಯ ಹರಿಕಾರ ಬಾಬೂಜಿ ಸಮಾಜದ ಕಟ್ಟಕಡೆಯ ವ್ಯಕ್ತಿಯ ಜೀವನಕ್ಕೂ ಆದ್ಯತೆ ಕೊಟ್ಟಿದ್ದರಿಂದ ಇಂದು ಸಮಾಜದಲ್ಲಿ ಆಹಾರ-ಪದಾರ್ಥಗಳ ಕೊರತೆಯಿಲ್ಲ ಎಂದು ಉಪ ತಹಸೀಲ್ದಾರ ಸಕ್ರಪ್ಪ ದೊಡ್ಡಮನಿ ಹೇಳಿದರು.

ಪಟ್ಟಣದ ಉಪ ತಹಸೀಲ್ದಾರ ಕಛೇರಿಯಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ಡಾ.ಬಾಬು ಜಗಜೀವನರಾಂ ಜಯಂತ್ಯುತ್ಸವದಲ್ಲಿ ಅವರು ಮಾತನಾಡಿದರು.

ಅಧಿಕಾರ ಮತ್ತು ಆಸ್ತಿಯಿಂದ ಗಳಿಸಲಾಗದ ಕೀರ್ತಿಯನ್ನು ಸೇವೆ ಹಾಗೂ ತ್ಯಾಗದಿಂದ ಗಳಿಸಬಹುದೆಂದು ಬಾಬು ಜಗಜೀವನರಾಂರ ಬದುಕು ತಿಳಿಸಿ ಕೊಡುತ್ತದೆ ಎಂದರು.

ಸುಧಾ ಕುರಡಗಿ, ಸಂಗಮೇಶ ಮಾದರ, ರಮೇಶ ಬಾಲನಗೌಡ್ರ, ಕೆ.ಎಚ್. ಅಣ್ಣಿಗೇರಿ ಇದ್ದರು.

### ಬಿಜೆಪಿ ಕಾರ್ಯಕರ್ತರೊಂದಿಗೆ ಬಹಿರಂಗ ಪ್ರಚಾರ ಸಭೆ ನಡೆಸಿದ ಬಸವರಾಜ ಬೊಮ್ಮಾಯಿ

## ಕಾಂಗ್ರೆಸ್ ಸರ್ಕಾರದ ಬೊಕ್ಕಸ ಬರಿದಾಗಿದೆ

■ವಿಜಯಸಾಕ್ಷಿ ಸುದ್ದಿ, ಹಾವೇರಿ

ಮುಖ್ಯಮಂತ್ರಿ ಸಿದ್ದರಾಮಯ್ಯನವರ ಆಡಳಿತಕ್ಕೂ ಅವರ ಅನುಭವಕ್ಕೂ ಬಹಳ ವ್ಯತ್ಯಾಸವಿದೆ. ಈ ಹತ್ತು ತಿಂಗಳಿನಲ್ಲಿ ಸಿದ್ದರಾಮಯ್ಯನವರ ಕೆಟ್ಟ ಆಡಳಿತ ಹೇಗಿದೆ ಎನ್ನುವುದು ಜನತೆಗೆ ಗೊತ್ತಾಗುತ್ತಿದೆ ಎಂದು ಮಾಜಿ ಮುಖ್ಯಮಂತ್ರಿ, ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಹೇಳಿದರು.

ಹಾವೇರಿ ಜಿಲ್ಲೆಯ ಹಾನಗಲ್ ತಾಲೂಕಿನ ಬೊಮ್ಮನಹಳ್ಳಿ ಗ್ರಾಮದಲ್ಲಿ ಶುಕ್ರವಾರ ಬಿಜೆಪಿ ಕಾರ್ಯಕರ್ತರೊಡನೆ ಬಹಿರಂಗ ಪ್ರಚಾರ ಸಭೆ ನಡೆಸಿ ಮತದಾರರಲ್ಲಿ ಮತಯಾಚಿಸಿ ಅವರು ಮಾತನಾಡಿದರು.

ಸಿದ್ದರಾಮಯ್ಯರ ಕಾಂಗ್ರೆಸ್ ಸರ್ಕಾರದಲ್ಲಿ ಯಾವುದೇ ಇಲಾಖೆಯಲ್ಲಿಯೂ ಒಂದು ಸಣ್ಣ ಕೆಲಸವೂ ಕೂಡ ಆಗಿಲ್ಲ. ಗ್ರಾಮೀಣ ಅಭಿವೃದ್ಧಿಯಲ್ಲಿ ಕೆಲಸ ಆಗಿಲ್ಲ.



ಜನರ ಕೆಲಸಗಳನ್ನು ಕಾಂಗ್ರೆಸ್ ಸರ್ಕಾರ ಮಾಡುತ್ತಿಲ್ಲ. ಯಾವುದೇ ಇಲಾಖೆಯಲ್ಲಿ ಅಭಿವೃದ್ಧಿಯಾಗಿಲ್ಲ ಎಂದು ಆರೋಪಿಸಿದರು.

ಗ್ಯಾರಂಟಿ ಯೋಜನೆಗಳಿಗೆ ಕಾಂಗ್ರೆಸ್ ಸರ್ಕಾರ ಸರಿಯಾದ ಹಣಕಾಸಿನ ವ್ಯವಸ್ಥೆ ಮಾಡಿಲ್ಲ. ಸರಿಯಾದ ವ್ಯವಸ್ಥೆ ಮಾಡದೆಯೇ ಕಾಂಗ್ರೆಸ್‌ನವರು ಗ್ಯಾರಂಟಿಗಳನ್ನು ಕೊಡುತ್ತೇವೆ ಎಂದರು. ಆದರೆ, ಇದ್ದ ಹಣಕಾಸಿಗೆ ಕೈ ಹಾಕಿ ಗ್ಯಾರಂಟಿ ಕೊಡುತ್ತಿದ್ದಾರೆ. ಇವರ ಖಜಾನೆಯ ಬೊಕ್ಕಸ ಬರಿದಾಗಿದೆ ಎಂದರು.

ಎಸ್‌ಸಿ/ಎಸ್‌ಟಿ ಸಮುದಾಯಗಳಿಗೆ ಮೀಸಲಿಟ್ಟಿದ್ದ 11300 ಕೋಟಿ ರೂ ಹಣವನ್ನು ಗ್ಯಾರಂಟಿಗಳಿಗೆ ಕೊಟ್ಟಿದ್ದಾರೆ. ಎಸ್‌ಸಿ/ಎಸ್‌ಟಿ ಜನಾಂಗಗಳಿಗೆ ಸಾಲ ಸೌಲಭ್ಯ ಸಿಗುತ್ತಿಲ್ಲ. ಗಂಗಾ ಕಲ್ಯಾಣ ಯೋಜನೆಯ ಲಾಭ ಸಿಗುತ್ತಿಲ್ಲ. ಇನ್ನು ರೈತರ ಬಗ್ಗೆಯಂತೂ ಕಾಂಗ್ರೆಸ್ ಸರ್ಕಾರಕ್ಕೆ ಯಾವುದೇ ಕಾಳಜಿಯಿಲ್ಲ. ಹಿಂದೆ ಬಿಜೆಪಿ ಸರ್ಕಾರದಲ್ಲಿ ತಾವು ಸಿಎಂ ಆಗಿದ್ದಾಗ, ಒಂದೇ ತಿಂಗಳಿನಲ್ಲಿ ರೈತರಿಗೆ ಬೆಳೆ ಪರಿಹಾರ ಕೊಟ್ಟಿದ್ದೆವು. 17 ಲಕ್ಷ ರೈತರಿಗೆ ಪರಿಹಾರ ಕೊಟ್ಟೆವು. ಆದರೆ, ರೈತರ ಕೆಲಸ ಮಾಡಲು ಕಾಂಗ್ರೆಸ್ ಸರ್ಕಾರಕ್ಕೆ ಮನಸಿಲ್ಲ.

ರೈತರನ್ನು ಉಳಿಸುವ ಕೆಲಸವನ್ನು ಸರ್ಕಾರ ಮಾಡಬೇಕು. ಆದರೆ, ಇವರೆಲ್ಲ ತಮ್ಮ ಹಾಗೂ ತಮ್ಮ ಸರ್ಕಾರದ ವೈಫಲ್ಯವನ್ನು ಮುಚ್ಚಿಕೊಳ್ಳಲು ಬರಿಯ ಭಾಷಣ ಮಾಡುತ್ತಿದ್ದಾರೆ. ಎಲ್ಲಾ ಜನಗಿರೂ ಸರಿಯಾದ ಗ್ಯಾರಂಟಿ ಮುಟ್ಟಿಲ್ಲ. ರಾಜ್ಯಕ್ಕೆ ಅಕ್ಕಿಯನ್ನು ಪ್ರಧಾನಿ ನರೇಂದ್ರ ಮೋದಿಯವರು ಕೇಂದ್ರದಿಂದ ಕೊಟ್ಟಿದ್ದಾರೆ ಎಂದರು.

ಈ ಸರ್ಕಾರದಲ್ಲಿ ಜನರ ಕೆಲಸ ಮಾಡಲು ಸಮಯವೇ ಇಲ್ಲ. ಆದರೆ, ಇವರು ಜನರಿಗೆ ಕೆಲಸ ಮಾಡುವುದಕ್ಕಿಂತ ತಮ್ಮ ತಮ್ಮ ಖುರ್ಚಿಯನ್ನು ಭದ್ರಗೊಳಿಸಿಕೊಳ್ಳಲು ಮಾತ್ರ ಓಡಾಡುತ್ತಿದ್ದಾರೆ. ಕಾಂಗ್ರೆಸ್‌ನಲ್ಲಿ ಕೆಲವು ಮಂತ್ರಿಗಳಿಗೆ ಲೋಕಸಭಾ ಚುನಾವಣೆ ನಿಲ್ಲಿ ಎಂದು ಹೇಳಿದ್ದಾರೆ. ಏಕೆಂದರೆ, 5 ಗ್ಯಾರಂಟಿಗಳ ಜೊತೆ ಅಭ್ಯರ್ಥಿಗಳನ್ನು ಸೋಲಿಸುವ ಗ್ಯಾರೆಂಟಿಯೂ ಸಿದ್ದರಾಮಯ್ಯ ಸರ್ಕಾರದ್ದಾಗಿದೆ.

ಮತ್ತೆ ಮೋದಿ ಸರ್ಕಾರ ಬಂದ ತಕ್ಷಣ ಈ ಸರ್ಕಾರದ ದಿನಗಣನೆ ಪ್ರಾರಂಭವಾಗಲಿದೆ. ಇನ್ನು 6 ತಿಂಗಳು ಅಥವಾ 1 ವರ್ಷದೊಳಗೆ ಕರ್ನಾಟಕ ರಾಜ್ಯದಲ್ಲಿ ವಿಧಾನಸಭೆ ಚುನಾವಣೆ ಬಂದೇ ಬರುತ್ತದೆ. ಕಾಂಗ್ರೆಸ್ ಸರ್ಕಾರ ಬಂದಾಗಲೆಲ್ಲಾ ಬರಗಾಲ ಗ್ಯಾರಂಟಿ, ಭ್ರಷ್ಟಾಚಾರ ಗ್ಯಾರಂಟಿ, ಜೀರೋ ಅಭಿವೃದ್ಧಿ ಗ್ಯಾರಂಟಿ. ಹೀಗಾಗಿ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ಸೋಲು ಕೂಡ ಗ್ಯಾರಂಟಿ ಎಂದು ಬಸವರಾಜ ಬೊಮ್ಮಾಯಿ ಭವಿಷ್ಯ ನುಡಿದರು.



■ವಿಜಯಸಾಕ್ಷಿ ಸುದ್ದಿ, ರೋಣ

ತಹಸೀಲ್ದಾರ್ ಕಚೇರಿಯಲ್ಲಿ ಮಾಜಿ ಉಪಪ್ರದಾನಿ ಹಾಗೂ ಹಸಿರು ಕ್ರಾಂತಿಯ ಹರಿಕಾರ ಡಾ. ಬಾಬು ಜಗಜೀವನ್ ರಾಮ್ ಅವರ 117ನೇ ಜಯಂತ್ಯುತ್ಸವವನ್ನು ಆಚರಿಸಲಾಯಿತು. ಈ ಸಂಧರ್ಭದಲ್ಲಿ ತಹಸೀಲ್ದಾರ್ ಕೆ.ನಾಗರಾಜ ಸೇರಿದಂತೆ ದಲಿತ ಮುಖಂಡರು ಹಾಗೂ ಕಚೇರಿಯ ಸಿಬ್ಬಂದಿಗಳು ಉಪಸ್ಥಿತರಿದ್ದರು.

### ಸಮುದಾಯ ಕಾಮಗಾರಿ ಸ್ಥಳದಲ್ಲಿ ಮತದಾನ ಜಾಗೃತಿ ಕಾರ್ಯಕ್ರಮ

## ಕಡ್ಡಾಯ ಮತದಾನ ಸಂವಿಧಾನದ ಆಶಯ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಗಟ್ಟಿಗೊಳಿಸಲು ಮತ್ತು ಯಶಸ್ವಿಯಾಗಿಸಲು ಸಂವಿಧಾನವು ಪ್ರತಿಯೊಬ್ಬ ಪ್ರಜೆಗೆ ಮತದಾನ ಮಾಡುವ ಹಕ್ಕನ್ನು ನೀಡಿದ್ದು, ಎಲ್ಲ ಅರ್ಹ ನಾಗರಿಕರು ಕಡ್ಡಾಯವಾಗಿ ಮತದಾನ ಮಾಡುವುದರಿಂದ ಮಾತ್ರ ಸದೃಢ ಪ್ರಜಾಪ್ರಭುತ್ವ ಕಟ್ಟಲು ಸಾಧ್ಯ. ಆ ದಿಸೆಯಲ್ಲಿ ಸಂವಿಧಾನಾತ್ಮಕ ಹಕ್ಕಾದ ಮತದಾನ ಕಾರ್ಯದಲ್ಲಿ ತಪ್ಪದೇ ಎಲ್ಲರೂ ಪಾಲ್ಗೊಳ್ಳುವಂತಾಗಬೇಕು ಎಂದು ಗ್ರಾ.ಪಂ ಅಭಿವೃದ್ಧಿ ಅಧಿಕಾರಿ ಎಂ.ಎನ್. ಮಲ್ಲೂರ ಹೇಳಿದರು.

ಲಕ್ಷ್ಮೇಶ್ವರ ತಾಲೂಕಿನ ಮಾಢಳ್ಳಿ ಗ್ರಾ.ಪಂ ವ್ಯಾಪ್ತಿಯ ಮಾಢಳ್ಳಿ ಮತ್ತು ಯತ್ನಳ್ಳಿ ಗ್ರಾಮದಲ್ಲಿಯ ಉದ್ಯೋಗ ಖಾತ್ರಿ ಯೋಜನೆಯ 'ವಲಸೆ ಯಾಕ್ರೀ, ನಿಮ್ಮೂರಲ್ಲೇ ಉದ್ಯೋಗ ಖಾತ್ರಿ' ಅಭಿಯಾನದಡಿ ಸಮುದಾಯ ಕಾಮಗಾರಿ ಸ್ಥಳದಲ್ಲಿ ಹಮ್ಮಿಕೊಂಡ ಮತದಾನ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಎಲ್ಲರನ್ನು ಒಳಗೊಳ್ಳುವ ರಾಷ್ಟ್ರ ನಿರ್ಮಾಣ ಮಾಡುವುದು ಸಂವಿಧಾನದ ಆಶಯವಾಗಿದೆ. ಈ ನಿಟ್ಟಿನಲ್ಲಿ ಎಲ್ಲ ವಯಸ್ಕರಿಗೂ ಸಮಾನ ಮತದಾನ ಹಕ್ಕು ಕಲ್ಪಿಸಲಾಗಿದೆ. ಎಲ್ಲರೂ ತಪ್ಪದೇ ಮತದಾನ ಮಾಡಬೇಕು. ಮೇ 7ರಂದು ಲೋಕಸಭೆ ಚುನಾವಣೆಗೆ ಮತದಾನ ಜರುಗಲಿದ್ದು, ಕುಟುಂಬದ ಎಲ್ಲ ಸದಸ್ಯರೊಂದಿಗೆ ಭಾಗಿಯಾಗುವಂತೆ ತಿಳಿಸಿದರು.

ಕಡ್ಡಾಯ ಮತದಾನ ಮಾಡುವಂತೆ ಮತದಾರರ ಜಾಗೃತಿ ಪ್ರತಿಜ್ಞಾ ವಿಧಿ ಬೋಧಿಸಲಾಯಿತು. ಈ ಸಂದರ್ಭದಲ್ಲಿ ಗ್ರಾ.ಪಂ ಕಾರ್ಯದರ್ಶಿ ಎನ್.ಪಿ. ಗಾವಡಿ, ಡಿಇಒ ಪ್ರಕಾಶ ಅಂಗಡಿ, ಗ್ರಾ.ಪಂ ಸಿಬ್ಬಂದಿ, ಕಾಯಕ ಬಂಧುಗಳು, ಕೂಲಿ ಕಾರ್ಮಿಕರು ಹಾಜರಿದ್ದರು.

ಗ್ರಾಮೀಣ ಜನರ ವಲಸೆ ತಪ್ಪಿಸಲು ಬೇಸಿಗೆ ಅವಧಿಯಲ್ಲಿ ಹೆಚ್ಚು ಕೆಲಸ ಒದಗಿಸುವ ಉದ್ದೇಶದಿಂದ ನರೇಗಾ ಯೋಜನೆಯಡಿ ಬದು ನಿರ್ಮಾಣ ಸೇರಿ ಇತರೆ ಸಮುದಾಯ ಕಾಮಗಾರಿ ಆರಂಭಿಸಲಾಗಿದೆ. ಮಹಿಳೆಯರು ಸೇರಿ ಎಲ್ಲ ಅರ್ಹರು ಯೋಜನೆಯಡಿ ಕೆಲಸಕ್ಕೆ ಬರಬೇಕು. ಪುರುಷರು ಮತ್ತು ಮಹಿಳೆಯರಿಗೆ ಸಮಾನ ಕೂಲಿ ನೀಡಲಾಗುತ್ತದೆ ರೈತರು ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಎಂ.ಎನ್. ಮಲ್ಲೂರ ತಿಳಿಸಿದರು.

### ರೋಟರಿ ಕ್ಲಬ್ ಗದಗ-ಬೆಟಗೇರಿಯಿಂದ ಯಶಸ್ವಿ 190ನೇ ನೇತ್ರ ಶಸ್ತ್ರ ಚಿಕಿತ್ಸಾ ಶಿಬಿರ

## 9 ಜನರಿಗೆ ನೇತ್ರ ಶಸ್ತ್ರ ಚಿಕಿತ್ಸೆ

■ವಿಜಯಸಾಕ್ಷಿ ಸುದ್ದಿ, ಗದಗ

ರೋಟರಿ ಕ್ಲಬ್ ಗದಗ-ಬೆಟಗೇರಿ ವೆಲ್‌ಫೇರ್ ಸೊಸೈಟಿ, ರೋಟರಿ ಕ್ಲಬ್ ಗದಗ-ಬೆಟಗೇರಿ, ಹಾಗೂ ಇನ್ನರ್ ವ್ಹೀಲ್ ಕ್ಲಬ್ ಆಫ್ ಗದಗ-ಬೆಟಗೇರಿ ಇವುಗಳ ಸಂಯುಕ್ತಾಶ್ರಯದಲ್ಲಿ ಜರುಗಿದ 190ನೇ ನೇತ್ರ ಶಸ್ತ್ರ ಚಿಕಿತ್ಸಾ ಶಿಬಿರದಲ್ಲಿ 9 ಜನರಿಗೆ ಯಶಸ್ವಿಯಾಗಿ ಕಣ್ಣಿನ ಶಸ್ತ್ರ ಚಿಕಿತ್ಸೆಯನ್ನು ನೆರವೇರಿಸಲಾಯಿತು.



ಶಿಬಿರವನ್ನು ದಿ. ಶ್ರೀಮತಿ ಸಿದ್ಧಮ್ಮ ಸಂಗಪ್ಪ ಗುಡಿಮನಿ ಇವರ ಸ್ಮರಣಾರ್ಥ ಶ್ರೀ ಶರಣಬಸಪ್ಪ (ರಾಜು) ಸಂ. ಗುಡಿಮನಿ, ದಿ. ಶ್ರೀ ಯಲ್ಲೇಶ ಜಿ.ಹುಕ್ಕೇರಿ ಇವರ ಸ್ಮರಣಾರ್ಥ ಶ್ರೀಮತಿ ಆಶಾ ವಾಯ್. ಹುಕ್ಕೇರಿ ಹಾಗೂ ಮಕ್ಕಳು, ದಿ. ಸೋಮಪ್ಪ ಎಸ್.ಡಂಬಳ ಹಾಗೂ ದಿ.ಶಕುಂತಲಾ ಎಸ್. ಡಂಬಳ ಇವರ ಸ್ಮರಣಾರ್ಥ ಶ್ರೀಮತಿ ಪ್ರೇಮಾ ಮೇಟಿ ಹಾಗೂ ಸಹೋದರರು ಶಿಬಿರದ ಪ್ರಾಯೋಜತ್ವವನ್ನು ವಹಿಸಿದ್ದರು. ಸುಮಾರು 65 ಜನ ರೋಗಿಗಳನ್ನು ತಪಾಸಣೆ ಮಾಡಿ ಶಸ್ತ್ರ ಚಿಕಿತ್ಸೆಗೆ ಯೋಗ್ಯರಾದ 10 ಜನರಿಗೆ ನೇತ್ರ ಶಸ್ತ್ರ ಚಿಕಿತ್ಸೆಯುನ್ನು ಕೈಗೊಂಡರು.

ಇನ್ನರ್ ವ್ಹೀಲ್ ಸಂಸ್ಥೆಯ ಮಾಜಿ ಅಧ್ಯಕ್ಷೆ ಪ್ರೇಮಾ ಮೇಟಿ ಮಾತನಾಡಿ, ಶಸ್ತ್ರ ಚಿಕಿತ್ಸೆಗೊಳಗಾದ ಪ್ರತಿಯೊಬ್ಬರೂ ವೈದ್ಯರ ಸಲಹೆಯನ್ನು ತಪ್ಪದೇ ಪಾಲಿಸಬೇಕೆಂದರು. ರೋಟರಿ ಕ್ಲಬ್ ಗದಗ-ಬೆಟಗೇರಿ ವೆಲ್‌ಫೇರ್ ಸೊಸೈಟಿಯ ಕಾರ್ಯದರ್ಶಿ ರೊ. ಬಾಲಕೃಷ್ಣ ಕಾಮತ್, ಇನ್ನರ್ ವ್ಹೀಲ್ ಸಂಸ್ಥೆಯ ಕಾರ್ಯದರ್ಶಿ ಹೇಮಲತಾ ಮುಂಗಾಲಿಯಾ ವೇದಿಕೆಯ ಮೇಲೆ ಉಪಸ್ಥಿತರಿದ್ದರು.

ರೋಟರಿ ಸಂಸ್ಥೆಯ ಕಾರ್ಯದರ್ಶಿ ರೊ. ತಿರ್ಲಾಪೂರ ಕಾರ್ಯಕ್ರಮ ನಿರೂಪಿಸಿದರು. ಸಂಸ್ಥೆಯ ಸದಸ್ಯರಾದ ರೊ. ಶಿವಾಚಾರ್ಯ ಎಸ್.ಹೊಸಳ್ಳಿಮಠ, ರೊ. ಡಾ. ಆರ್.ಬಿ. ಉಪ್ಪಿನ, ರೊ. ಡಾ. ಪ್ರದೀಪ ಉಗಲಾಟ, ರೊ. ಹೆಚ್. ಎಸ್. ಪಾಟೀಲ, ರೊ. ಅಕ್ಷಯ ವ್ಹಿ.ಶೆಟ್ಟಿ, ಚನ್ನವೀರಪ್ಪ ಹುಣಶಿಕಟ್ಟಿ, ವಿಶ್ವನಾಥ ಯಳಮಲಿ, ಇನ್ನರ್ ವ್ಹೀಲ್ ಸಂಸ್ಥೆಯ ಸದಸ್ಯರಾದ ಆಶಾ ಹುಕ್ಕೇರಿ, ವಿದ್ಯಾ ಗಂಜಿಹಾಳ ಮುಂತಾದವರು ಉಪಸ್ಥಿತರಿದ್ದರು.

ಶಸ್ತ್ರ ಚಿಕಿತ್ಸಾ ಶಿಬಿರದಲ್ಲಿ ರುದ್ರೇಶ, ಜ್ಯೋತಿ ದೊಡ್ಡಮನಿ, ನೇತ್ರ ಹೆಚ್, ಶಕುಂತಲಾ, ಆನಂದ ಸಿಂಗ್ರಿ ನೇತ್ರ ಶಸ್ತ್ರ ಚಿಕಿತ್ಸೆ ನಡೆಸಲು ಸಹಾಯ ಮಾಡಿದರು. ರೋಟರಿ ಕ್ಲಬ್ ಗದಗ-ಬೆಟಗೇರಿ ವೆಲ್‌ಫೇರ್ ಸೊಸೈಟಿಯ ಕಾರ್ಯದರ್ಶಿ ರೊ. ಬಾಲಕೃಷ್ಣ ಕಾಮತ ಸರ್ವರಿಗೂ ಧನ್ಯವಾದಗಳನ್ನು ತಿಳಿಸಿದರು.

ಶಸ್ತ್ರ ಚಿಕಿತ್ಸೆಗೂ ಮುನ್ನ ನಡೆದ ಕಾರ್ಯಕ್ರಮದ ಅಧ್ಯಕ್ಷತೆಯನ್ನು ರೋಟರಿ ಕ್ಲಬ್ ಗದಗ-ಬೆಟಗೇರಿ ವೆಲ್‌ಫೇರ್ ಸೊಸೈಟಿಯ ಅಧ್ಯಕ್ಷ ರೊ. ಶ್ರೀಧರ ಸುಲ್ತಾನಪೂರ ವಹಿಸಿದ್ದರು. ಅಸಿಸ್ಟಂಟ್ ಗವರ್ನರ್ ರೊ. ಶರಣಬಸಪ್ಪ ಗುಡಿಮನಿ ಮಾತನಾಡಿ, ರೋಟರಿ ಸಂಸ್ಥೆಯು ಕಳೆದ 22 ವರ್ಷಗಳಿಂದ ಈ ಶಿಬಿರವನ್ನು ಯಶಸ್ವಿಯಾಗಿ ನಡೆಸಿಕೊಂಡು ಬರುತ್ತಿದೆ ಎಂದರು.

## ಉತ್ತಮ ಸಮಾಜಕ್ಕೆ ಸ್ಕೌಟ್ಸ್, ಗೈಡ್ಸ್ ಸಹಕಾರಿ



■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಉತ್ತಮ ಸಮಾಜ ನಿರ್ಮಾಣ ಮಾಡಲು ಸ್ಕೌಟ್ಸ್, ಗೈಡ್ಸ್ ಮಕ್ಕಳಿಗೆ ಈ ಶಿಬಿರ ಸಹಕಾರಿಯಾಗಿದೆ ಎಂದು ಗದಗ ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಿನಮನಿ ಹೇಳಿದರು.

ಅವರು ಪಟ್ಟಣ ಸಮೀಪದ ಕಣವಿ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಜರುಗಿದ ಸ್ಕೌಟ್ಸ್, ಗೈಡ್ಸ್ ತರಬೇತಿ ಸಮಾರೋಪ ಸಮಾರಂಭದಲ್ಲಿ ಮಾತನಾಡಿ, ಇಂದಿನ ಮಕ್ಕಳು ನಾಳಿನ ಉತ್ತಮ ಪ್ರಜೆಗಳು. ಉತ್ತಮ ಪ್ರಜೆಗಳಾಗುವುದರ ಜೊತೆಯಲ್ಲಿ ಉತ್ತಮ ಸಮಾಜ ನಿರ್ಮಾಣ ಮಾಡಲು ಸ್ಕೌಟ್ಸ್, ಗೈಡ್ಸ್ ತರಬೇತಿ ಪ್ರಾಥಮಿಕ ಹಂತದಲ್ಲಿ ಪಡೆಯುವುದರಿಂದ ಮಕ್ಕಳಲ್ಲಿ ಶಿಸ್ತು ಸಮಯ ಪ್ರಜ್ಞೆ, ಸಮಾಜ ಸೇವೆಯ ಗುಣಗಳು ಬೆಳೆಯುತ್ತವೆಯಲ್ಲದೆ, ಮುಂದಿನ ಭವಿಷ್ಯಕ್ಕೆ ಸಹಕಾರಿಯಾಗುತ್ತದೆ ಎಂದರು.

ಶಾಲಾ ಗುರುಮಾತೆ ಎಲ್.ಪಿ. ಕಟ್ಟಿಮನಿ, ಶಂಕರ ಹಡಗಲಿ, ದೈಹಿಕ ಶಿಕ್ಷಣಾಧಿಕಾರಿ ಪವಾರ, ಜಿ.ಎಚ್. ಪೂಜಾರ, ಎ.ಎಸ್. ಶಿವಕುಮಾರ, ಸ್ಕೌಟ್ಸ್, ಗೈಡ್ಸ್ ಸಂಚಾಲಕಿ ರತ್ನಾ ಗುಂಜಳ, ಆರ್.ಬಿ. ಕಟ್ಟಿಮನಿ, ಎಸ್.ಎಚ್. ಹೊಸಮನಿ, ಎನ್.ವಿ. ಗಿರಿರಡ್ಡಿ, ಟಿ.ಆರ್. ಹೊಂಬಳ, ವಾಯ್.ಬಿ. ಗೋವಣ್ಣವರ, ಸ್ಕೌಟ್ಸ್, ಗೈಡ್ಸ್ ಶಿಬಿರಾರ್ಥಿಗಳು ಇದ್ದರು.

## ಕಳಸಾಪೂರ ಹುಡ್ಕೋ ನಿವೇಶನ ಫಲಾನುಭವಿಗಳ ಸಭೆ ನಾಳೆ

■ ವಿಜಯಸಾಕ್ಷಿ ಸುದ್ದಿ, ಗದಗ

ಕಳಸಾಪೂರ ಹುಡ್ಕೋ ಬಡಾವಣೆಯ ಸರ್ವಾಂಗೀಣ ಅಭಿವೃದ್ಧಿ, ನೀರು ಪೂರೈಕೆಯ ಬಗ್ಗೆ ಗದಗ ನಗರಾಭಿವೃದ್ಧಿ ಸಚಿವರಾದ ಡಾ. ಎಚ್.ಕೆ. ಪಾಟೀಲರನ್ನು ಹುಡ್ಕೋ ನಿವಾಸಿಗಳ ನಿಯೋಗದೊಂದಿಗೆ ಡಾ. ಆರ್.ಎಚ್. ಕಬಾಡಿಯವರು ಭೇಟಿಯಾಗಿ ಮನವಿ ಸಲ್ಲಿಸಿದ್ದು, ಸಚಿವರು ಗದಗ ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರು, ಗದಗ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳು ಇವರಿಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ನಿರ್ದೇಶನ ನೀಡಿದ್ದಾರೆ.

ಪತ್ರದ ಪ್ರತಿಯನ್ನು ಸಂಘಟಕರಾದ ಡಾ. ಆರ್.ಎಚ್. ಕಬಾಡಿಯವರಿಗೆ ಕಳುಹಿಸಿದ್ದು, ಈ ಬಗ್ಗೆ ಚರ್ಚಿಸಿ ಮುಂದಿನ ಅಗತ್ಯ ಕಾರ್ಯಚಟುವಟಿಕೆಗಳ ಬಗ್ಗೆ ಚರ್ಚಿಸಲು ಏ.7ರ ಸಾಯಂಕಾಲ 5.30ಕ್ಕೆ ಸಿದ್ಧಲಿಂಗ ನಗರದ 2ನೇ ಕ್ರಾಸ್‌ನಲ್ಲಿರುವ ಉದ್ಯಾನವನದಲ್ಲಿ ಸರ್ವ ಸದಸ್ಯರ ಸಭೆ ಕರೆದಿದೆ.

ಕಾರಣ ಹೆಚ್ಚಿನ ಸಂಖ್ಯೆಯಲ್ಲಿ ಎಲ್ಲ ಸದಸ್ಯರು ಬಂದು ಸಲಹೆ-ಸೂಚನೆ ನೀಡಲು ಡಾ. ಆರ್.ಎಚ್. ಕಬಾಡಿ (9448905406) ವಿನಂತಿಸಿದ್ದಾರೆ.

### ಎಸ್‌ಎಸ್‌ಕೆ ಶ್ರೀ ಜಗದಂಬಾ ಶಾಲೆಯ ವಿದ್ಯಾರ್ಥಿಗಳ ಸಾಧನೆ

## ಚಿತ್ರಕಲಾ ಸ್ಪರ್ಧೆಯಲ್ಲಿ ಪ್ರಶಸ್ತಿ



■ ವಿಜಯಸಾಕ್ಷಿ ಸುದ್ದಿ, ಗದಗ

ಇತ್ತೀಚೆಗೆ ಆಂಧ್ರಪ್ರದೇಶ ಸ್ಟೇಟ್ ಕ್ರಿಯೇಟಿವಿಟಿ ಅಂಡ್ ಕಲ್ಚರ್ ಕಮಿಷನ್, ಕ್ರಿಯೇಟಿವಿಟಿ ಫೈನ್ ಆರ್ಟ್ಸ್ ಅಕಾಡೆಮಿ, ಬಾಬು ಎಜುಕೇಶನಲ್ ಅಂಡ್ ಸರ್ವಿಸ್ ಸೊಸೈಟಿ ಗುಂಟೂರು ಇವರ ಸಂಯುಕ್ತ ಆಶ್ರಯದಲ್ಲಿ ನಡೆದ ಇಂಡಿಯಾ ಆರ್ಟ್ ಫೆಸ್ಟಿವಲ್ ಅಮ್ರಾವತಿ ನ್ಯಾಷನಲ್ ಆರ್ಟ್ ಕಾಂಪಿಟೇಶನ್ ಚಿತ್ರಕಲಾ ಸ್ಪರ್ಧೆಯು ಜರುಗಿತು.

ಧೀರಜ್, ಕನಿಕ್ಷ, ನಾಸರಿನ, ಸಾಯಿ, ವೈಭವ್ ಅರ್. ಅರವಟ್ಟಿಗೆ, ಆಕಾಶ ಎಸ್.ಬಂಕಣ್ಣವರ, ನೀರಜ ಉಪ್ಲಾದ, ಚಂದನ, ಚೇತನ ಆರ್.ಗೊಂಬಿ, ಮದನ ಎಂ.ಕುರಿ, ವರ್ಷಾ ಜ.ಕಣವಿ, ತನುಶ್ರೀ ಆರ್.ಫುಲ್‌ಪಾಟೀಲ, ಸಮರ್ಥ ಎಸ್. ಕಳಸದ, ಸಮಿತ್ ಎಚ್.ಅಡಿವಿಸಂಬಾಪುರ, ಸಂಜನಾ ಬಿ.ಕೆ, ಪ್ರಿಯದರ್ಶಿನಿ ಸಿ.ಕೆ, ಮೋಹಿತ ಕಬಾಡಿ ಈ ವಿದ್ಯಾರ್ಥಿಗಳು ವಿಷಯ ಪೂರಕ ಚಿತ್ರಗಳನ್ನು ರಚಿಸಿ ಎಸ್‌ಎಸ್‌ಕೆ ಶ್ರೀ ಜಗದಂಬಾ ಶಿಕ್ಷಣ ಸಂಸ್ಥೆಗೆ ಕೀರ್ತಿ ತಂದಿದ್ದಾರೆ.

ಈ ಸ್ಪರ್ಧೆಯಲ್ಲಿ ಗದಗ ಜಿಲ್ಲೆಯ ಬೆಟಗೇರಿಯ ಎಸ್‌ಎಸ್‌ಕೆ ಶ್ರೀ ಜಗದಂಬಾ ಪ್ರಾಥಮಿಕ ಮತ್ತು ಪ್ರೌಢಶಾಲೆಯ 25 ವಿದ್ಯಾರ್ಥಿಗಳು ಭಾಗವಹಿಸಿ 7 ಬಂಗಾರದ ಪದಕ, ಸ್ಮರಣಿಕೆ, ಪ್ರಮಾಣಪತ್ರವನ್ನು ಪಡೆದಿದ್ದಾರೆ. ವಿದ್ಯಾರ್ಥಿಗಳಾದ ಸ್ಫೂರ್ತಿ ಎಂ.ಮುರುಡಿ, ನಾನೇಶ್ವರಿ ಆರ್.ಮುಟಗಾರ, ಸಂಜನಾ ಪಿ.ಲಿಂಬೆನಗೌಡ್ರು, ಅಮೃತಾ ಆರ್. ಹತ್ತಿಕಾಳ, ಸಂಜನಾ ಬಿದರೂರು, ಪ್ರತಿಭಾ ಬಸವಾ, ಸಮರ್ಥ್‌ಸಿಂಗ್ ಕಾಟಿವಾಲಾ ಕಲಾ ಪದಕ ಪ್ರಶಸ್ತಿ ಪಡೆದಿದ್ದಾರೆ.

ಇವರಿಗೆ ಚಿತ್ರಕಲೆ ತರಬೇತಿ ನೀಡಿದ ಬೆಸ್ಟ್ ನ್ಯಾಷನಲ್ ಟೀಚರ್ ಪ್ರಶಸ್ತಿ ಪುರಸ್ಕೃತ ಡಾ. ಜಾಕೀರಹುಸೇನ್ ಎಮ್.ಕೊರ್ಲಹಳ್ಳಿ ಇವರಿಗೆ ಮತ್ತು ವಿದ್ಯಾರ್ಥಿಗಳಿಗೆ ಶಿಕ್ಷಣ ಸಂಸ್ಥೆಯು ಅಧ್ಯಕ್ಷ ಲೋಕನಾಥ್ ಬಿ.ಕಬಾಡಿ, ಜಿ.ವಿ. ಬಸವಾ, ವಾಯ್ಸ್ ಚೇರಮನ್ ದತ್ತು ಯು.ಪವಾರ್ ಕಮಿಟಿಯ ಸರ್ವ ಸದಸ್ಯರು, ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ಎಸ್.ಡಿ. ಬೆಣಕಲ್, ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯ ಸಿ.ಎಸ್. ಹವಳದ, ಶಾಲೆಯ ಸಿಬ್ಬಂದಿ ವರ್ಗ, ಸಹ ಶಿಕ್ಷಕರು ಹಾಗೂ ಕ್ರಿಯೇಟಿವಿಟಿ ಫೈನ್ ಆರ್ಟ್ಸ್ ಅಕಾಡೆಮಿಯ ಡೈರೆಕ್ಟರ್ ಕೆ. ಸುನೀತಾ, ಡಾ. ಕೆ.ಪಿ. ಬಾಬು, ಸಿ.ಇ.ಓ., ಆಂಧ್ರಪ್ರದೇಶ ಸ್ಟೇಟ್ ಕ್ರಿಯೇಟಿವಿಟಿ ಆಂಡ್ ಕಲ್ಚರಲ್ ಕಮಿಶನರ್ ಮಲ್ಲಿಕಾರ್ಜುನ ರಾವ್ ಹಾರ್ದಿಕ ಅಭಿನಂದನೆ ಸಲ್ಲಿಸಿದ್ದಾರೆ.

### ಬಿ.ಜಿ.ಅಣ್ಣಿಗೇರಿ ಗುರುಕುಲದಲ್ಲಿ ಉಚಿತ ಟ್ಯೂಶನ್‌ಗೆ ಡಿಡಿಪಿಐ ಚಾಲನೆ

# ಅಣ್ಣಿಗೇರಿ ಗುರುಗಳದು ಮೇರು ವ್ಯಕ್ತಿತ್ವ

■ ವಿಜಯಸಾಕ್ಷಿ ಸುದ್ದಿ, ಗದಗ

ಶಿಕ್ಷಣ ತಜ್ಞ ಬಿ.ಜಿ. ಅಣ್ಣಿಗೇರಿ ಅವರು ವಿದ್ಯಾರ್ಥಿಗಳಿಗೆ ಉಚಿತ ಟ್ಯೂಶನ್ ಹೇಳುವ ಮೂಲಕ ಗುರುಕುಲ ಮಾದರಿಯಲ್ಲಿ ಮಕ್ಕಳಿಗೆ ಉಚಿತ ಶಿಕ್ಷಣದೊಂದಿಗೆ ನೈತಿಕ ಮೌಲ್ಯಗಳನ್ನು ರೂಢಿಸಿದ ಮೇರು ವ್ಯಕ್ತಿತ್ವ ಹೊಂದಿದವರಾಗಿದ್ದರು ಎಂದು ಡಿಡಿಪಿಐ ಎಂ.ಎ. ರಡ್ಡೇರ ಅಭಿಪ್ರಾಯಪಟ್ಟರು.

ಅವರು ಶುಕ್ರವಾರ ನಗರದ ಬಿ.ಜಿ. ಅಣ್ಣಿಗೇರಿ ಗುರುಗಳ ಆಶ್ರಮ ಹಾಗೂ ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನದ ಸಹಯೋಗದಲ್ಲಿ 8, 9 ಹಾಗೂ 10ನೇ ತರಗತಿಯ ವಿದ್ಯಾರ್ಥಿಗಳಿಗಾಗಿ ಹಮ್ಮಿಕೊಂಡಿರುವ ಉಚಿತ ಟ್ಯೂಶನ್ ಪ್ರಾರಂಭೋತ್ಸವವನ್ನು ಉದ್ಘಾಟಿಸಿ ಮಾತನಾಡಿದರು.

ಬಿ.ಜಿ. ಅಣ್ಣಿಗೇರಿ ಅವರು ಶಿಕ್ಷಕರಾಗಿ, ಮುಖ್ಯೋಪಾಧ್ಯಾಯರಾಗಿ ಅತ್ಯುನ್ನತ ಸೇವೆಗೈದವರು. ತಾವಿರುವ ಕೊಠಡಿಯಲ್ಲಿ ತಮ್ಮೊಂದಿಗೆ ಇದ್ದ ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳಿಗೆ ಉಚಿತ ಪಾಠ ಹೇಳಿಕೊಡುವದನ್ನು ಪ್ರಾರಂಭಿಸಿದರು. ಕಾಲಕ್ರಮೇಣ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಾಗುತ್ತ ಬಂತು. ಇಲ್ಲಿ ಪಾಠ ಹೇಳಿಸಿಕೊಂಡವರು ಪ್ರತಿಭಾನ್ವಿತ ವಿದ್ಯಾರ್ಥಿಗಳಾಗಿ ಅತ್ಯುತ್ತಮ ಫಲಿತಾಂಶ ಕಂಡುಕೊಂಡರು. ಇಲ್ಲಿ ಟ್ಯೂಶನ್ ಹೇಳಿಸಿಕೊಂಡವರು ಇಂದು ದೊಡ್ಡ ದೊಡ್ಡ ಹುದ್ದೆಯಲ್ಲಿರುವದು ಅಣ್ಣಿಗೇರಿ ಗುರುಗಳ ಬೋಧನೆಗೆ ಹಿಡಿದ ಕೈಗನ್ನಡಿಯಾಗಿದೆ ಎಂದರು.

ಅಣ್ಣಿಗೇರಿ ಅವರೊಂದಿಗೆ ಇತರ ಶಿಕ್ಷಕ-ಶಿಕ್ಷಕಿಯರು ಬೇರೆ ಬೇರೆ ವಿಷಯಗಳನ್ನು ವಿದ್ಯಾರ್ಥಿಗಳಿಗೆ ಬೋಧಿಸುತ್ತ ಬಂದರು. ಅಣ್ಣಿಗೇರಿ ಅವರ ಅಗಲುವಿಕೆಯ ಬಳಿಕ ಈ ಆಶ್ರಮಕ್ಕೊಂದು ಹೊಸ ಆಯಾಮ ನೀಡಲಾಗಿದೆ. ಶಿಕ್ಷಣ ಪ್ರೇಮಿಗಳು ಒಗ್ಗೂಡಿ, ಗುರುಕುಲ ಆಶ್ರಮ ಪರಂಪರೆಯನ್ನು ಮುಂದುವರೆಸುವ ಮೂಲಕ ಅಣ್ಣಿಗೇರಿ ಗುರುಗಳ ಕನಸು, ಪರಂಪರೆಯನ್ನು ಮುಂದುವರೆಸಿದ್ದು ಅಭಿನಂದನೀಯ. ನಾನೂ ಇಲ್ಲಿ ಟ್ಯೂಶನ್ ಹೇಳಿಸಿಕೊಂಡಿದ್ದೇನೆ ಎಂದರು.



ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಎ.ಎಸ್.ಎಸ್ ಹಾಗೂ ಲಯನ್ಸ್ ಶಿಕ್ಷಣ ಸಂಸ್ಥೆಯ ಚೇರಮನ್ ಆನಂದ ಪೋತ್ನೀಸ್ ಮಾತನಾಡಿ, ಈ ಗುರುಕುಲ ಆಶ್ರಮದಲ್ಲಿ ಶ್ರದ್ಧೆ ಮತ್ತು ನಿಷ್ಠೆಯಿಂದ ಪರಿಶ್ರಮದೊಂದಿಗೆ ಅಭ್ಯಾಸ ಮಾಡಿದರೆ ವಿದ್ಯಾರ್ಥಿಗಳ ಭವಿಷ್ಯ ಉಜ್ವಲವಾಗುವದು ಎಂದರು.

ಇನ್ನೋರ್ವ ಮುಖ್ಯ ಅತಿಥಿ, ಆಶ್ರಮದ ಹಳೆಯ ವಿದ್ಯಾರ್ಥಿ ಹುಬ್ಬಳ್ಳಿ ಕೆಎಂಸಿಯ ಹಿರಿಯ ವೈದ್ಯಾಧಿಕಾರಿ ಡಾ. ಶರಣಬಸವ ಚೌಕಿಮಠ ಮಾತನಾಡಿ, ಟ್ಯೂಶನ್ ಇಂದು ಕಮರ್ಶಿಯಲ್ ಆಗಿ ಹಣ ಗಳಿಸುವ ವೃತ್ತಿಯಾಗಿದೆ. ಇಂತಹ ಸಂದರ್ಭದಲ್ಲೂ ಆಶ್ರಮದಲ್ಲಿ ಅನುಭವಿ ಶಿಕ್ಷಕರು ಮಕ್ಕಳಿಗೆ ಉಚಿತ ಬೋಧನೆಗೆ ಮುಂದಾಗಿರುವದು ಅಭಿನಂದನೀಯ ಎಂದರು.

ವೇದಿಕೆಯ ಮೇಲೆ ಶಂಕ್ರಪ್ಪ ಅಣ್ಣಿಗೇರಿ, ಬಸವರಾಜ ಬಿಂಗಿ, ಸಿದ್ದು ಕವಲೂರ, ಕೃಷ್ಣರಡ್ಡಿ ಗಿರಡ್ಡಿ, ಜಿ.ಎಂ. ಫಿರಂಗಿ ಉಪಸ್ಥಿತರಿದ್ದರು. ಪಾವನಿ ಮುನವಳ್ಳಿ ಪ್ರಾರ್ಥಿಸಿದರು. ಎಸ್.ಜಿ. ಅಣ್ಣಿಗೇರಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಳಕಪ್ಪ ಕುರ್ತಕೋಟಿ ನಿರೂಪಿಸಿದರು. ಶಿವಾನಂದ ಕಟ್ಟಿ ವಂದಿಸಿದರು. ವಿಜಯಲಕ್ಷ್ಮೀ ಅಂಗಡಿ ಪ್ರಸಾದ ಸೇವೆ ವಹಿಸಿಕೊಂಡಿದ್ದರು.

ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನದ ಅಧ್ಯಕ್ಷ ಶಿವಕುಮಾರ ಎಚ್.ಪಾಟೀಲ ಮಾತನಾಡಿ, ಅಣ್ಣಿಗೇರಿ ಗುರುಗಳ ಕನಸು, ಸಂಕಲ್ಪಗಳನ್ನು ಸಾಕಾರಗೊಳಿಸುವ ನಿಟ್ಟಿಯಲ್ಲಿ ಪ್ರತಿಷ್ಠಾನವು ಬದ್ಧತೆಯಿಂದ ಕಾರ್ಯ ಮಾಡುತ್ತಿದೆ. ಸರ್ವರ ಸಹಾಯ, ಸಹಕಾರದೊಂದಿಗೆ ಗುರುಕುಲ ಪದ್ಧತಿಯನ್ನು ಮುಂದುವರೆಸಿ ಈ ಭಾಗದಲ್ಲಿ ಕಲಿಸುವಿಕೆ ಮತ್ತು ಕಲಿಯುವಿಕೆಯಲ್ಲಿ ಸುಧಾರಣೆಗಳನ್ನು ತರಲು ಪ್ರಯತ್ನಿಸಲಾಗುವದು. ಒಟ್ಟಾರೆಯಾಗಿ ಈ ಭಾಗದ ಮಕ್ಕಳ ಭವಿಷ್ಯ ಸುಂದರವಾಗಿ ರೂಪುಗೊಳ್ಳುವಂತಾಗಬೇಕು ಎಂದರು.

ಶಿಕ್ಷಕ ವೃಂದದವರಾದ ಪ್ರಸನ್ನಕುಮಾರ, ಅರುಣಕುಮಾರ ಹಾದಿ, ಮಂಜುಳಾ, ಜ್ಯೋತಿ ವಡಗೇರಿ ಸೇರಿದಂತೆ ವಿದ್ಯಾರ್ಥಿಗಳು, ಪಾಲಕ, ಪೋಷಕರು ಪಾಲ್ಗೊಂಡಿದ್ದರು.



# ಪ್ರಜಾಪ್ರಭುತ್ವದ ದೃಷ್ಟಿಯಿಂದ ಮತ ಚಲಾಯಿಸಿ

■ ವಿಜಯಸಾಕ್ಷಿ ಸುದ್ದಿ, ರೋಣ

ಮತದಾನ ಸಂವಿಧಾನಬದ್ಧ ಹಕ್ಕಾಗಿದ್ದು, 18 ವರ್ಷದ ಮೇಲ್ಪಟ್ಟವರೆಲ್ಲರೂ ತಮ್ಮ ಹಕ್ಕನ್ನು ಚಲಾಯಿಸುವ ಮೂಲಕ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಬಲಗೊಳಿಸಬೇಕು ಎಂದು ತಾ.ಪಂ ಇಓ ಎಸ್.ಕೆ. ಇನಾಮದಾರ ಹೇಳಿದರು.

ಅವರು ಶುಕ್ರವಾರ ಕುರಹಟ್ಟಿ ಗ್ರಾಮದಲ್ಲಿ ನರೇಗಾ ಯೋಜನೆಯಲ್ಲಿ ಭಾಗಿಯಾದ ಕೂಲಿ ಕಾರ್ಮಿಕರನ್ನು ಉದ್ದೇಶಿಸಿ ಮಾತನಾಡಿದರು.

ಮತದಾನದ ದಿನದಂದು ಮತದಾರರು ನಿಷ್ಕಾಳಜಿ ತೋರಬಾರದು. ಕಾರಣ, ಮತದಾನ ಎನ್ನುವುದು ಪವಿತ್ರ ಕರ್ತವ್ಯವಾಗಿದೆ. ಹೀಗಾಗಿ ಪ್ರಜಾಪ್ರಭುತ್ವದ ದೃಷ್ಟಿಯಿಂದ ಮತ ಚಲಾಯಿಸಬೇಕು. ಸಂವಿಧಾನ ನಮಗೆ ಮತದಾನದ ಮೂಲಕ ಶಕ್ತಿಯನ್ನು ನೀಡಿದ್ದು, ಸದ್ಬಳಕೆಯಾಗಬೇಕು ಎಂದರು.



ಪ್ರಜಾಪ್ರಭುತ್ವದಲ್ಲಿ ಮತದಾರನೇ ನಿಜವಾದ ಪ್ರಭು. ಪ್ರಜಾಪ್ರಭುತ್ವ ಉಳಿಯಬೇಕಾದರೆ ದೇಶದ ಪ್ರಜೆಗಳಾದ ನಾವು ಕಡ್ಡಾಯ ಮತದಾನ ಮಾಡಬೇಕು. ಮೇ 7ರಂದು ನಡೆಯುವ ಲೋಕಸಭಾ ಚುನಾವಣೆಯಲ್ಲಿ ಕುರಹಟ್ಟಿ ಗ್ರಾಮದ ಎಲ್ಲ ಮತದಾರರು ತಮ್ಮ ಹಕ್ಕನ್ನು ಚಲಾಯಿಸಬೇಕು ಎಂದರು.

ಇದೇ ಸಂಧರ್ಭದಲ್ಲಿ ಮತದಾನದ ಪ್ರತಿಜ್ಞಾ ವಿಧಿಯನ್ನು ಬೋಧಿಸಲಾಯಿತು.

ಪಿಡಿಓ ಐ.ಎಫ್. ಬೋದ್ಲೇಖಾನ್, ಶಾಂತಾ ತಿಮ್ಮರೆಡ್ಡಿ, ಶಿವಾನಂದ ಪೂಜಾರ ಸೇರಿದಂತೆ ಗ್ರಾ.ಪಂ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಸಂವಿಧಾನ ವಿರೋಧಿ ಹೇಳಿಕೆ: ಬಂಧನಕ್ಕೆ ಒತ್ತಾಯ



■ ವಿಜಯಸಾಕ್ಷಿ ಸುದ್ದಿ, ರೋಣ

ರಾಜ್ಯ ಸೇರಿದಂತೆ ದೇಶದಲ್ಲಿ ಕೆಲ ಬಿಜೆಪಿ ನಾಯಕರು ಹಾಗೂ ಲೋಕಸಭಾ ಚುನಾವಣೆಗೆ ಸ್ಪರ್ಧಿಸಿರುವ ಅಭ್ಯರ್ಥಿಗಳು ಸಂವಿಧಾನ ವಿರೋಧಿ ಹೇಳಿಕೆಗಳನ್ನು ನೀಡುತ್ತಿರುವುದು ಖಂಡನೀಯವಾಗಿದ್ದು, ಚುನಾವಣಾ ಆಯೋಗ ಇವರ ಮೇಲೆ ಪ್ರಕರಣ ದಾಖಲಿಸಿ, ಬಂಧಿಸಬೇಕು ಎಂದು ದಲಿತ ಸಂಘರ್ಷ ಸಮಿತಿಯ ಪದಾಧಿಕಾರಿಗಳು ತಹಸೀಲ್ದಾರ್ ಕೆ.ನಾಗರಾಜರಿಗೆ ಶುಕ್ರವಾರ ಮನವಿ ಸಲ್ಲಿಸಿದರು.

ತಾಲೂಕಾ ಸಂಚಾಲಕ ಸೋಮು ನಾಗರಾಜ ಮಾತನಾಡಿ, ಈ ಹಿಂದೆ ಬಿಜೆಪಿ ಪಕ್ಷದ ಎಂಪಿಯೊಬ್ಬರು ಸಂವಿಧಾನ ಬದಲಾಯಿಸುವುದಾಗಿ ಹೇಳಿಕೆ ಕೊಟ್ಟಿದ್ದನ್ನು ಮರೆಯುವ ಮುನ್ನವೇ ರಾಜಸ್ಥಾನ ನಾಗೋರ್ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಜ್ಯೋತಿ ಮಿರ್ಧಾರವರು ಬಿಜೆಪಿ ಅಧಿಕಾರಕ್ಕೆ ಬಂದರೆ ಸಂವಿಧಾನ ಬದಲಾಯಿಸುವುದಾಗಿ ಹೇಳಿರುವುದು ಖಂಡನೀಯವಾಗಿದೆ. ಈ ಕೂಡಲೇ ಕೇಂದ್ರ ಚುನಾವಣಾ ಆಯೋಗದ ಮುಖ್ಯಸ್ಥರು ಇವರ ಮೇಲೆ ಪ್ರಕರಣ ದಾಖಲಿಸಿ, ಬಂಧಿಸಬೇಕು ಎಂದು ಆಗ್ರಹಿಸಿದರು.

ಮೌನೇಶ ಹಾದಿಮನಿ, ಪ್ರಕಾಶ ಹೊಸಳ್ಳಿ, ಸುರೇಶ ನಡುವಿನಮನಿ, ವೀರಪ್ಪ ತೆಗ್ಗಿನಮನಿ, ಮೈಲಾರಪ್ಪ ಚಳ್ಳಮರದ, ಹನಮಪ್ಪ ದ್ವಾಸಲ್, ಸುಭಾಶ ಕೆಂಗಾರ, ಅಭಿಷೇಕ ಕೊಪ್ಪದ, ಪರಶುರಾಮ ಹೊಸಮನಿ ಸೇರಿದಂತೆ ದಲಿತ ಸಂಘಟನೆಯ ಮುಖಂಡರು ಉಪಸ್ಥಿತರಿದ್ದರು.

### ಅಕುಶಲ ಕಾರ್ಮಿಕರಿಗೆ ಮತದಾನ ಜಾಗೃತಿ ಮೂಡಿಸಿದ ಡಾ. ಡಿ.ಮೋಹನ್

# ಮಳೆಯಾಗುವವರೆಗೂ ನಿರಂತರ ಕೆಲಸ

■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಮೇ 7ರಂದು ನಡೆಯುವ ಲೋಕಸಭೆ ಚುನಾವಣೆಯಲ್ಲಿ ಎಲ್ಲರೂ ತಪ್ಪದೇ ಮತದಾನ ಮಾಡುವ ಮೂಲಕ ಮತದಾನ ಪ್ರಮಾಣ ಹೆಚ್ಚಿಸಬೇಕು ಎಂದು ನೀತಿ ಸಂಹಿತೆ ನೋಡಲ್ ಅಧಿಕಾರಿಗಳು ಹಾಗೂ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಡಾ. ಡಿ.ಮೋಹನ್ ಹೇಳಿದರು.

ಗಜೇಂದ್ರಗಡ ತಾಲೂಕಿನ ಶಾಂತಗೇರಿ ಗ್ರಾ.ಪಂ ವ್ಯಾಪ್ತಿಯ ಬೊಮ್ಮಸಾಗರ ಗ್ರಾಮದಲ್ಲಿ ಶುಕ್ರವಾರ ನಡೆದ ಸಾಮೂಹಿಕ ಬದು ನಿರ್ಮಾಣ ಕಾಮಗಾರಿ ಸ್ಥಳದಲ್ಲಿ ಕೂಲಿಕಾರರನ್ನು ಉದ್ದೇಶಿಸಿ ಅವರು ಮಾತನಾಡಿದರು.

ವರ್ಷದಿಂದ ವರ್ಷಕ್ಕೆ ಗ್ರಾಮೀಣ ಪ್ರದೇಶದಲ್ಲಿ ಮತದಾನ ಪ್ರಮಾಣ ಕಡಿಮೆಯಾಗುತ್ತಿದ್ದು, ಕೂಲಿಕಾರರು, ಗ್ರಾಮೀಣ ಪ್ರದೇಶದ ಜನರು ಕಡ್ಡಾಯವಾಗಿ ಮತದಾನ ಮಾಡಬೇಕು. 18 ವರ್ಷ ಮೇಲ್ಪಟ್ಟ ಯುವಕ-ಯುವತಿಯರು ತಪ್ಪದೇ ಮತದಾನ ಮಾಡುವಂತೆ ತಿಳಿಸಿದರು.

ಮತದಾನ ನಮ್ಮೆಲ್ಲರ ಹಕ್ಕಾಗಿದೆ. ಮತದಾನದಿಂದ ಯಾರೂ ಹೊರಗುಳಿಯದೆ ಕಡ್ಡಾಯವಾಗಿ ಮತದಾನ ಮಾಡಿ, ಗ್ರಾಮೀಣ ಪ್ರದೇಶದಲ್ಲಿ ಮತದಾನ ಪ್ರಮಾಣ ಹೆಚ್ಚಿಸಬೇಕು ಎಂದು ಮನವಿ ಮಾಡಿದರು.



ಬೇಸಿಗೆಯಲ್ಲಿ ಯಾರೂ ಗುಳೇ ಹೋಗದಂತೆ ಸ್ಥಳೀಯವಾಗಿ ಉದ್ಯೋಗ ಖಾತರಿ ಯೋಜನೆಯಡಿ ಕೆಲಸ ನೀಡಲಾಗುತ್ತದೆ. ಮಳೆಯಾಗುವವರೆಗೂ ನಿಮಗೆ ನಿರಂತರ ಕೆಲಸ ನೀಡಲಾಗುವುದು. ಎಂದು ತಿಳಿಸಿದರು.

ನೀವು ಸರಿಯಾಗಿ ಕೆಲಸ ಮಾಡಬೇಕು ಕೂಲಿಕಾರರು ಎನ್‌ಎಂಆರ್‌ನಲ್ಲಿ ಹೆಸರು ಇರುವ ಬಗ್ಗೆಎ ಮೊದಲು ಪರಿಶೀಲಿಸಿ, ನಂತರ ಕೆಲಸಕ್ಕೆ ಬರಬೇಕು. ಒಂದು ವೇಳೆ ಹೆಸರು ಇಲ್ಲದೆ ಕೆಲಸಕ್ಕೆ ಬಂದರೆ ಹಣ ಬರುವುದಿಲ್ಲ. ಕೂಲಿಕಾರರು ಎರಡು ಬಾರಿ ಕಡ್ಡಾಯವಾಗಿ ಹಾಜರಿ ಹಾಕಿಸಬೇಕು. ಅದರಲ್ಲಿ ಒಂದು ಹಾಜರಿ ಹಾಕಿಸದಿದ್ದರೂ ಹಣ ಬರುವುದಿಲ್ಲ. ಕೂಲಿಕಾರರು ಅಳತೆಗೆ ತಕ್ಕಂತೆ ಪಡ ಕಡಿಯಬೇಕು. ನೀವು ಕಡಿಯದಿದ್ದರೆ ಕೂಲಿ ಅಳತೆ ಎಷ್ಟು ಇರುತ್ತದೆ ಅಷ್ಟೇ ಹಣ ಜಮಾ ಮಾಡುತ್ತಾರೆ. ಹೀಗಾಗಿ, ಸರಿಯಾಗಿ ಕೆಲಸ ಮಾಡಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಪಿಡಿಓ ಎಸ್. ಕೆ. ಕವಡೇಲಿ, ಐಇಸಿ ಸಂಯೋಜಕ ಮಂಜುನಾಥ ಹಳ್ಳದ, ಟಿಎಂಐಎಸ್ ಸಂಯೋಜಕ ವಸಂತ ಅನ್ವರಿ, ತಾಂತ್ರಿಕ ಸಂಯೋಜಕರಾದ ಪ್ರಿಯಾಂಕ ಅಂಗಡಿ, ಎಸ್.ಡಿ.ಎ ಪವಾಡಿಗೌಡ್ರ, ಟಿಎಎ ಸಿದ್ದು ಗುಡಿಮನಿ, ಬಿಎಫ್.ಟಿ ಜ್ಯೋತಿ ವಡ್ಡರ, ಡಿಇಓ ಪ್ರಕಾಶ, ಜಿಕೆಎಂ ಶಿವಗಂಗಾ ಹುಲ್ಲಣ್ಣವರ, ಗ್ರಾ.ಪಂ. ಸಿಬ್ಬಂದಿಗಳು, ಕಾಯಕ ಬಂಧುಗಳು, ಕೂಲಿಕಾರರು ಹಾಜರಿದ್ದರು.

ತಾ.ಪಂ ಸಹಾಯಕ ನಿರ್ದೇಶಕ ಬಸವರಾಜ ಬಡಿಗೇರ್ ಮಾತನಾಡಿ, ವಲಸೆ ಯಾಕ್ರೀ, ನಿಮ್ಮೂರಲ್ಲೇ ಉದ್ಯೋಗ ಖಾತ್ರಿ ಅಭಿಯಾನದ ಮೂಲಕ ಏಪ್ರಿಲ್ 1ರಿಂದ ಮೇ ಅಂತ್ಯದವರೆಗೂ 2 ತಿಂಗಳು ನಿರಂತರ ಕೆಲಸ ನೀಡಲಾಗುತ್ತದೆ. ಕೂಲಿಕಾರರು ಹೇಗೆ ಕೆಲಸ ಮಾಡುತ್ತೀರಿ ಎಂಬುದರ ಮೇಲೆ ನಿಮಗೆ ಮುಂದಿನ ಕೆಲಸ ನೀಡಲಾಗುತ್ತದೆ. ಆ ನಿಟ್ಟನಲ್ಲಿ ಕೂಲಿಕಾರರು ಚೆನ್ನಾಗಿ ಕೆಲಸ ಮಾಡಿ ಪಂಚಾಯಿತಿಗೆ ಸಹಕಾರ ನೀಡಿದರೆ, ಎರಡು ತಿಂಗಳ ನಿರಂತರ ಕೆಲಸ ನೀಡಲಾಗುವುದು ಎಂದು ತಿಳಿಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka